# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –245 | ಆರ್‌ಎನ್ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 21–04–2025 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 02 Issue - 245 | RNI No: KARKAN/2023/88462 | KA/SK/CTA-874/2024-2026 | Chitradurga | Date: 21-04-2025 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಕುವೆಂಪುರವರ ಮಂತ್ರಮಾಂಗಲ್ಯದ ಮೂಲಕ ಸುಂದರ ಬದುಕು ಕಟ್ಟಿಕೊಳ್ಳಿ 2

ವೈಭವದ ಹಿಂದೂರಾಷ್ಟ್ರ ಕಟ್ಟುವ ಸಂಕಲ್ಪ ಮಾಡಿ: ಕೃಷ್ಣಪ್ರಸಾದ್ 3

ಅಂಬೇಡ್ಕರ್– ಗಾಂಧಿ ಶತ್ರುಗಳೇ– ಮಿತ್ರರೇ.... ಉದಾಹರಣೆ ಮತ್ತು ಎಚ್ಚರಿಕೆ...... 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಏ.21ರಂದು ರಜತ ಮಹೋತ್ಸವ ಭವನದ ಉದ್ಘಾಟನಾ ಸಮಾರಂಭ

» **ಚಿತ್ರದುರ್ಗ**

ಚಿತ್ರದುರ್ಗ ಕೃಷಿ ತಂತ್ರಜ್ಞರ ಸಂಸ್ಥೆ ಪ್ರಾದೇಶಿಕ ಘಟಕ ರಜತ ಮಹೋತ್ಸವ ಭವನದ ಉದ್ಘಾಟನಾ ಸಮಾರಂಭ ಇದೇ ಏ.21ರಂದು ಬೆಳಿಗ್ಗೆ 11ಕ್ಕೆ ಚಿತ್ರದುರ್ಗ ನಗರ ಎಪಿಎಂಸಿ ಆವರಣದ 'ಇ' ಬ್ಲಾಕ್‌ನಲ್ಲಿ ಹಮ್ಮಿಕೊಳ್ಳಲಾಗಿದೆ. ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ರಜತ ಮಹೋತ್ಸವ ಭವನ ಉದ್ಘಾಟನೆ ನೆರವೇರಿಸುವರು. ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರಪಪ್ಪಿ ಸಮಾರಂಭ ಉದ್ಘಾಟಿಸುವರು. ಸಂಸದ ಗೋವಿಂದ ಎಂ.ಕಾರಜೋಳ ಘನ ಉಪಸ್ಥಿತಿ ವಹಿಸುವರು. ಕೃಷಿ ಬೆಲೆ ಆಯೋಗದ ಅಧ್ಯಕ್ಷ ಡಾ.ಅಶೋಕ ಎಂ.ದಳವಾಯಿ ಉಪನ್ಯಾಸ ನೀಡುವರು. ಚಿತ್ರದುರ್ಗ ಕೃಷಿ ತಂತ್ರಜ್ಞರ ಸಂಸ್ಥೆ ಪ್ರಾದೇಶಿಕ ಘಟಕದ ಅಧ್ಯಕ್ಷ ಜಿ.ಸಿ.ರಂಗಸ್ವಾಮಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಹೊಸದುರ್ಗ ಶಾಸಕರು ಹಾಗೂ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ಅಧ್ಯಕ್ಷ ಬಿ.ಜಿ.ಗೋವಿಂದಪ್ಪ, ಚಳ್ಳಕೆರೆ ಶಾಸಕರು ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ಅಧ್ಯಕ್ಷ ಟಿ.ರಘುಮೂರ್ತಿ, ಮೊಳಕಾಲ್ಮುರು ಶಾಸಕ ಎನ್.ವೈ.ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ್, ನಿವೃತ್ತ ಕೃಷಿ ನಿರ್ದೇಶಕರು ಹಾಗೂ ಬೆಂಗಳೂರು ಕೃಷಿ ತಂತ್ರಜ್ಞರ ಸಂಸ್ಥೆ ಅಧ್ಯಕ್ಷೆ ನಂದಿನಿ ಕುಮಾರಿ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯಿತಿ ಸಿಇಓ ಎಸ್.ಜೆ.ಸೋಮಶೇಖರ್, ಜಂಟಿ ಕೃಷಿ ನಿರ್ದೇಶಕರು ಹಾಗೂ ಚಿತ್ರದುರ್ಗ ಕೃಷಿ ತಂತ್ರಜ್ಞರ ಸಂಸ್ಥೆ ಪ್ರಾದೇಶಿಕ ಘಟಕ ಗೌರವಾಧ್ಯಕ್ಷ ಬಿ.ಮಂಜುನಾಥ್, ಸಂಸ್ಥಾಪಕ ಅಧ್ಯಕ್ಷ ಹಾಗೂ ದಿ ಮರ್ಚೆಂಟ್ಸ್ ಸೌಹಾರ್ದ ಸಹಕಾರಿ ಬ್ಯಾಂಕ್ ಅಧ್ಯಕ್ಷ ಎಸ್.ಆರ್.ಲಕ್ಷ್ಮೀಕಾಂತರೆಡ್ಡಿ, ಸಂಸ್ಥಾಪನ ಸದಸ್ಯ ಕೆ.ಹೆಚ್.ಸೀತಾರಾಮರೆಡ್ಡಿ, ನಿವೃತ್ತ ವಿಸ್ತರಣಾ ನಿರ್ದೇಶಕರು ಹಾಗೂ ಪ್ರೇರಕ ಡಾ.ವಿ.ವೀರಭದ್ರಯ್ಯ, ಬಬ್ಬೂರು ಫಾರಂ ತೋಟಗಾರಿಕೆ ಮಹಾವಿದ್ಯಾಲಯ ಡೀನ್ ಡಾ.ಸುರೇಶ್ ಡಿ.ಏಕಬೋಟೆ, ವಲಯ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರ ಸಹ ಸಂಶೋಧನಾ ನಿರ್ದೇಶಕ ಡಾ.ಶರಣಪ್ಪ ಜಂಗಂಡಿ, ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಹಾಗೂ ಮುಖ್ಯಸ್ಥ ಡಾ.ಓ.ಕುಮಾರ್, ಇಆರ್‌ಎಂ ಸಮೂಹ ಸಿ.ಎಸ್.ಆರ್ ಮುಖ್ಯಸ್ಥ ಮಂಜುನಾಥ್, ಬೆಂಗಳೂರು ಕೃಷಿ ತಂತ್ರಜ್ಞರ ಸಂಸ್ಥೆ ಉಪಾಧ್ಯಕ್ಷ ಎಂ.ಮಹಾಂತೇಶಪ್ಪ, ಕಾರ್ಯದರ್ಶಿ ವೀರಣ್ಣ ಕೆ.ಕಮತರ, ಚಿತ್ರದುರ್ಗ ಕೃಷಿ ತಂತ್ರಜ್ಞರ ಸಂಸ್ಥೆ ಪ್ರಾದೇಶಿಕ ಘಟಕ ಕಟ್ಟಡ ಸಮಿತಿ ಅಧ್ಯಕ್ಷ ಇ.ಜಯರಾಮರೆಡ್ಡಿ, ಸದಸ್ಯರಾದ ಜಿ.ಚಿದಾನಂದಪ್ಪ, ಜೆ.ತಿಪ್ಪೇಸ್ವಾಮಿ ಭಾಗವಹಿಸುವರು ಎಂದು ಚಿತ್ರದುರ್ಗ ಕೃಷಿ ತಂತ್ರಜ್ಞರ ಸಂಸ್ಥೆ ಪ್ರಾದೇಶಿಕ ಘಟಕ ಕಾರ್ಯದರ್ಶಿ ಜಿ.ಟಿ.ವೀರಭದ್ರರೆಡ್ಡಿ ಹಾಗೂ ಉಪಾಧ್ಯಕ್ಷ ಕಟ್ಟಾ ಶ್ರೀನಿವಾಸರೆಡ್ಡಿ ತಿಳಿಸಿದ್ದಾರೆ.

### ಚರಂಡಿಯಲ್ಲಿ ನವಜಾತ ಶಿಶುವಿನ ಮೃತದೇಹ ಪತ್ತೆ.

» **ಚಳ್ಳಕೆರೆ**

ತಾಲ್ಲೂಕಿನ ತಳಕು ಪೊಲೀಸ್ ಠಾಣಾ ವ್ಯಾಪ್ತಿಯ ಚಿಕ್ಕಮ್ಮನಹಳ್ಳಿ ಗ್ರಾಮದ ರಸ್ತೆಯ ಚರಂಡಿಯಲ್ಲಿ ನವಜಾತ ಶಿಶುವಿನ ಮೃತದೇಹ ಪತ್ತೆಯಾಗಿದ್ದು, ಸಾರ್ವಜನಿಕರ ಮಾಹಿತಿ ಮೇರೆಗೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿರುತ್ತಾರೆ. ಗ್ರಾಮದ ಚರಂಡಿಯಲ್ಲಿ ನವಜಾತಶಿಶುವಿನ ಮೃತದೇಹ ವೀಕ್ಷಿಸಿದ ಸಾರ್ವಜನಿಕರು ಕೂಡಲೇ ತಳಕು ಪೊಲೀಸರಿಗೆ ಮಾಹಿತಿ ನೀಡಿದ್ಧಾರೆ. ಯಾವ ಸಮಯದಲ್ಲಿ ಯಾರೂ ನವಜಾತಶಿಶುವನ್ನು ಚರಂಡಿಯಲ್ಲಿ ಎಸೆದಿದ್ದಾರೆ ಎಂಬ ಬಗ್ಗೆ ಮಾಹಿತಿ ಇಲ್ಲ. ನವಜಾತ ಶಿಶುವಿನ ಮೃತದೇಹ ದೊರೆತ ಬಗ್ಗೆ ಪೊಲೀಸರು ವಿಚಾರಣೆ ಮುಂದುವರೆಸಿದ್ಧಾರೆ.

### ದೆಹಲಿಯಲ್ಲಿ ಕೆ. ಜೈಮುನಿಗೆ 'ಬೆಸ್ಟ್ ಯೋಗ ಮಾಸ್ಟರ್'

» **ದೆಹಲಿ**

ಭಾರತ ಸರ್ಕಾರದಿಂದ ಮಾನ್ಯತೆ ಪಡೆದ ಲೆಜೆಂಡರಿ ಪೀಸ್ ಅವಾರ್ಡ್ಸ್ ಕೌನ್ಸಿಲ್ ಆಶ್ರಯದಲ್ಲಿ ಕಾನ್‌ಸ್ಟಿಟ್ಯೂಷನ್ ಕ್ಲಬ್ ಆಫ್ ಇಂಡಿಯಾದಲ್ಲಿ ನಡೆದ ಸರಳ ಸಮಾರಂಭದಲ್ಲಿ ಡಾಕ್ಟರೇಟ್ ಪುರಸ್ಕೃತರಾದ ಕೆ. ಜೈಮುನಿ ಅವರಿಗೆ ಯೋಗ ಕ್ಷೇತ್ರದಲ್ಲಿನ ಅತ್ಯುತ್ತಮ ಸಾಧನೆಗಾಗಿ 'ಬೆಸ್ಟ್ ಯೋಗ ಮಾಸ್ಟರ್' ಗೌರವ ಡಾಕ್ಟರೇಟ್ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು.

#### ಹಾಳಾಗುತ್ತಿರುವ ಹಳ್ಳಿಗಳ ರಸ್ತೆಗಳು; ಸರ್ಕಾರಕ್ಕೆ ಹೆಚ್ಚುತ್ತಿರುವ ಆರ್ಥಿಕ ಹೊರೆ

# ಮನೆ ಮನೆಗೆ ಗಂಗೆ; ಅನುದಾನ ಅದ್ವಾನ!

» **ಹೊಸದುರ್ಗ**

ಗ್ರಾಮೀಣ ಭಾಗಗಳ ಪ್ರತಿ ಮನೆ ಮನೆಗೆ ಶುದ್ಧ ಕುಡಿಯುವ ನೀರನ್ನು ಪೂರೈಸಬೇಕೆಂಬ ಉದ್ದೇಶದಿಂದ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದ ಸಹಭಾಗಿತ್ವದಲ್ಲಿ ಜಾರಿಗೆ ಬಂದಿರುವ 'ಜಲಜೀವನ್ ಮಿಷನ್' ಮನೆ ಮನೆಗೆ ಗಂಗೆ ಯೋಜನೆಯ ಕಾಮಗಾರಿಯ ಕಾರ್ಯ ಸಂಪೂರ್ಣವಾಗಿ ಅವೈಜ್ಞಾನಿಕವಾಗಿ ನಡೆಯುತ್ತಿದ್ದು, ಕಾಮಗಾರಿಯ ನೆಪದಲ್ಲಿ ತಾಲೂಕಿನ ಬಹಳಷ್ಟು ಗ್ರಾಮಗಳ ರಸ್ತೆಗಳನ್ನು ಬಗೆದು ಹಾಳುಗೆಡವಿ ಅವ್ಯವಸ್ಥೆಗೊಳಿಸಲಾಗುತ್ತಿದ್ದು, ಇದರಿಂದಾಗಿ ಸರ್ಕಾರದ ಅನುದಾನ ಅದ್ವಾನವಾಗುತ್ತಿರುವ ಬಗ್ಗೆ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಹೊಸದುರ್ಗ ತಾಲೂಕಿನ 4 ಹೋಬಳಿಗಳ 33 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಬಹಳಷ್ಟು ಗ್ರಾಮಗಳಲ್ಲಿ ಜಲಜೀವನ್ ಯೋಜನೆಯ ಕಾಮಗಾರಿ ಆರಂಭವಾಗಿ ಅರ್ಧಕ್ಕೆ ನಿಂತಿದೆ. ಇನ್ನೂ ಕೆಲವು ಗ್ರಾಮಗಳಲ್ಲಂತೂ ಜನರಿಗೆ ಈ ಯೋಜನೆಯ ವಾಸನೆಯೂ ಮುಟ್ಟಿಲ್ಲ, ಕಾಮಗಾರಿ ಅರ್ಧಕ್ಕೆ ನಿಂತಿರುವ ಗ್ರಾಮಗಳ ರಸ್ತೆಗಳಲ್ಲಿ ಜನರು ಮತ್ತು ವಾಹನಗಳು ಓಡಾಟ ನಡೆಸುವುದೇ ದುಸ್ಥರವಾಗಿದೆ. ವೃದ್ಧರು, ಅಂಗವಿಕಲರು ಹಾಗೂ ಅನಾರೋಗ್ಯಕ್ಕೆ ತುತ್ತಾಗಿರುವವರು ಒಬ್ಬರೇ ಓಡಾಟ ನಡೆಸುವುದು ಕಷ್ಟವಾಗಿದ್ದು, ಮತ್ತೊಬ್ಬರ ಸಹಾಯವಿಲ್ಲದೆ ರಸ್ತೆಗಳಲ್ಲಿ ಓಡಾಟ ನಡೆಸಲು ಸಾಧ್ಯವಿಲ್ಲದಂತಾಗಿಬಿಟ್ಟಿದೆ.

ಹೊಸದುರ್ಗ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗದ ಜನಾಂಗದವರು ಹೆಚ್ಚಾಗಿ ವಾಸಿಸುತ್ತಿರುವ ತಾಲೂಕಾಗಿದ್ದು, ಇಲ್ಲಿ ಒಟ್ಟು 225 ಜನವಸತಿ ಗ್ರಾಮಗಳಿವೆ. ನಂಜುಂಡಪ್ಪ ವರದಿಯ ಪ್ರಕಾರ ಹೊಸದುರ್ಗ ಹಿಂದುಳಿದ ತಾಲೂಕುಗಳ ಪಟ್ಟಿಯಲ್ಲಿದೆ. ಇಂತಹ ಸಂದರ್ಭದಲ್ಲಿ ಅವೈಜ್ಞಾನಿಕ ಕಾಮಗಾರಿಗಳಿಂದಾಗಿ ತಾಲೂಕು ಪ್ರಗತಿ ಕಾಣಲು ಸಾಧ್ಯವೇ? ಗ್ರಾಮೀಣ ಭಾಗಗಳಿಗೆ ಒಂದು ಬಾರಿ ರಸ್ತೆ ಮಂಜೂರು ಮಾಡಿಸಿಕೊಳ್ಳುವುದೇ ದುಸ್ತರ. ಅಂತಹದರಲ್ಲಿ ಇತ್ತೀಚೆಗೆ, ಹೊಸದಾಗಿ ನಿರ್ಮಾಣವಾಗಿದ್ದ ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಾಂಗದವರು ವಾಸಿಸುವ ಕಾಲೋನಿಗಳಲ್ಲಿ ಹಾಗೂ ವಿಶೇಷ ಯೋಜನೆಯಲ್ಲಿ ನಿರ್ಮಾಣವಾಗಿರುವ ಮುಖ್ಯ ರಸ್ತೆಗಳನ್ನು ಕೂಡ ಪೈಪ್ ಲೈನ್ ಮಾಡುವ ನೆಪದಲ್ಲಿ ಕಿತ್ತುಹಾಕಿದ್ದು, ಇದರಿಂದಾಗಿ ಜನರಿಗೆ ಮತ್ತು ವಾಹನಗಳ ಓಡಾಟಕ್ಕೆ ಬಹಳಷ್ಟು ತೊಂದರೆಯಾಗುತ್ತಿದೆ.

ಸರ್ಕಾರದಿಂದ ರಸ್ತೆಯ ಪುನರ್ ನಿರ್ಮಾಣಕ್ಕಾಗಿ ಮತ್ತಷ್ಟು ಹಣವನ್ನು ವ್ಯಯಿಸಬೇಕಿದ್ದು, ಇದರಿಂದ ಸರ್ಕಾರಕ್ಕೆ ಇನ್ನಷ್ಟು ಆರ್ಥಿಕ ಹೊರೆ ಹೆಚ್ಚಾಗಲಿದೆ. ಈ ಯೋಜನೆಯಿಂದಾಗಿ ಗ್ರಾಮೀಣ ಭಾಗದ ಕೆಲವು ಸ್ಥಳಾಂತರ ಪ್ರದೇಶಗಳಲ್ಲಿ ರಾಜ್ಯ ಸರ್ಕಾರ ಈ ಮೊದಲು ಜಾರಿಗೆ ತಂದಿದ್ದ ವಿಶೇಷ ಕುಡಿಯುವ ನೀರಿನ ಯೋಜನೆಗಳಿಗೆ ಎಳ್ಳು–ನೀರು ಬಿಡಲಾಗುತ್ತಿದೆ ಎಂಬ ಮಾತುಗಳು ಕೂಡ ಕೇಳಿಬರುತ್ತಿವೆ. ಟೆಂಡರ್ ಆದ 6 ತಿಂಗಳ ಒಳಗಾಗಿ ಕಾಮಗಾರಿ ಪ್ರಾರಂಭಿಸಬೇಕೆಂಬ ಸರ್ಕಾರದ ಆದೇಶವಿದ್ದರೂ, ಕೆಲಸ ಪ್ರಾರಂಭವಾಗಿ 1 ವರ್ಷ ಕಳೆದರೂ ಕಾಮಗಾರಿ ಪೂರ್ಣಗೊಳ್ಳದೆ ಇರುವುದಕ್ಕೆ ಕಾರಣವೇನೆಂಬುದು ತಿಳಿಯುತ್ತಿಲ್ಲ. ಈ ಯೋಜನೆಯ ಹೆಸರಿನಲ್ಲಿ ನಡೆಯುತ್ತಿರುವ ಅವೈಜ್ಞಾನಿಕ ಕಾಮಗಾರಿಯಿಂದಾಗಿ ಅಂತೂ ಗ್ರಾಮೀಣ ಭಾಗದ ಜನರಿಗೆ ಬಹಳಷ್ಟು ಸಮಸ್ಯೆಯಾಗುತ್ತಿದ್ದು, ಕೆಲವು ಹಳ್ಳಿಗಳಲ್ಲಿ ಕಿತ್ತು ಹೋಗಿರುವ ರಸ್ತೆಗಳಲ್ಲಿ ಕೆಲ ಜನರು ಬಿದ್ದು ಗಾಯಗೊಂಡಿರುವ ಘಟನೆಗಳು ನಡೆದಿವೆ. ಮಳೆಗಾಲದಲ್ಲಂತೂ ಕಿತ್ತು ಹೋಗಿ, ಗುಂಡಿ ಬಿದ್ದಿರುವ ರಸ್ತೆಗಳು ಕೆಸರುಗದ್ದೆಯಾಗಿರುತ್ತವೆ. ಸ್ವಲ್ಪ ಆಯ ತಪ್ಪಿದರೂ ಜೀವ ಹಾನಿಯಾಗುವ ಸಾಧ್ಯತೆಗಳಿವೆ. ಈಗಲಾದರೂ ಸಂಬಂಧಪಟ್ಟ ಅಧಿಕಾರಿಗಳು ಮತ್ತು ಗುತ್ತಿಗೆದಾರರು ಎಚ್ಚೆತ್ತುಕೊಂಡು ಕಾಮಗಾರಿಯನ್ನು ವ್ಯವಸ್ಥಿತವಾಗಿ, ವೈಜ್ಞಾನಿಕವಾಗಿ ಪೂರ್ಣಗೊಳಿಸಬೇಕೆಂಬುದು ಸಾರ್ವಜನಿಕರ ಆಗ್ರಹವಾಗಿದ್ದು, ಈ ಬಗ್ಗೆ ಪ್ರತಿಕ್ರಿಯೆ ಪಡೆಯಲು ಫೋನ್ ಕರೆಯ ಮೂಲಕ ಹಲವು ಬಾರಿ ಸಂಸದ ಗೋವಿಂದ ಕಾರಜೋಳ ಅವರನ್ನು ಸಂಪರ್ಕಿಸಲು ಪ್ರಯತ್ನಿಸಿದರು, ಸಂಸದರು ಫೋನ್ ಕರೆಯ ಸಂಪರ್ಕಕ್ಕೆ ಸಿಗಲಿಲ್ಲ.






ನಮ್ಮ ಜನ ವಿಶೇಷ

> ಗ್ರಾಮೀಣ ಭಾಗದಲ್ಲಿರುವ ಪ್ರತಿ ಮನೆಗಳಿಗೆ ಶುದ್ಧ ಕುಡಿಯುವ ನೀರಿನ ಸಂಪರ್ಕ ಕಲ್ಪಿಸುವ ಮೂಲಕ ಪ್ರತಿಯೊಬ್ಬರಿಗೂ ಶುದ್ಧ ನೀರು ಪೂರೈಕೆಯಾಗಬೇಕೆಂಬ ಯೋಜನೆ ಇದಾಗಿದ್ದು, ಇಲಾಖೆಯ ಅಧಿಕಾರಿಗಳು ಹಾಗೂ ಗುತ್ತಿಗೆದಾರರ ನಿರ್ಲಕ್ಷ್ಯದಿಂದಾಗಿ ತಾಲೂಕಿನ ಬಹಳಷ್ಟು ಗ್ರಾಮಗಳಲ್ಲಿ ಕಾಮಗಾರಿ ಪೂರ್ಣಗೊಳ್ಳದೆ ಅರ್ಧಕ್ಕೆ ನಿಂತಿದೆ. ಕಾಮಗಾರಿ ಆರಂಭವಾಗಿ 6 ತಿಂಗಳೊಳಗಾಗಿ ಪೂರ್ಣಗೊಳ್ಳಬೇಕೆಂಬ ಸರ್ಕಾರದ ಆದೇಶವಿದೆ. ಆದರೂ, ಇಲ್ಲಿಯವರೆಗೂ ಒಂದು ಗ್ರಾಮದಲ್ಲೂ ಕಾಮಗಾರಿ ಪೂರ್ಣಗೊಂಡಿಲ್ಲ. ಗ್ರಾಮಗಳಲ್ಲಿ ಹಾಕಿರುವ ಪೈಪ್ ಮತ್ತು ನಲ್ಲಿಗಳು ಕಳಪೆಯಾಗಿದ್ದು, ದೀರ್ಘಕಾಲ ಬಾಳಿಕೆಗೆ ಬರುತ್ತವೆಯೇ ಎಂಬುದೇ ಸಂಶಯ. ಉತ್ತಮವಾಗಿ ನಿರ್ಮಾಣವಾಗಿದ್ದ ರಸ್ತೆಗಳೆಲ್ಲ ಹಾಳಾಗಿ ಹೋಗುತ್ತಿವೆ. ಪ್ರತಿಯೊಂದು ಗ್ರಾಮ ಪಂಚಾಯಿತಿಯಲ್ಲಿಯೂ ಸಭೆ ಸೇರಿದಾಗ ಇದೇ ವಿಚಾರವಾಗಿ ಗಲಾಟೆ ನಡೆಯುತ್ತಿವೆ. ಅಧಿಕಾರಿಗಳು ಗುತ್ತಿಗೆದಾರರ ಮೇಲೆ ದೂರುವುದು, ಗುತ್ತಿಗೆದಾರರು ಅಧಿಕಾರಿಗಳ ಮೇಲೆ ಹೇಳುವುದು. ಹೀಗೆಯೇ ಈ ಬಗ್ಗೆ ಯಾರನ್ನೇ ಕೇಳಿದರು ಸರಿಯಾದ ಉತ್ತರ ಉತ್ತರ ನೀಡುತ್ತಿಲ್ಲ. ಪ್ರತಿಯೊಂದು ಹಳ್ಳಿಯಲ್ಲಿಯೂ ಅವೈಜ್ಞಾನಿಕ ಕಾಮಗಾರಿ ನಡಿದಿದ್ದು, ಜನರು ಗ್ರಾಮ ಪಂಚಾಯಿತಿ ಸದಸ್ಯರ ಮೇಲೆ ಮುಗಿ ಬೀಳುತ್ತಿದ್ದಾರೆ. ಈ ವಿಚಾರ ತಾಲ್ಲೂಕಿನ ಎಲ್ಲಾ ಗ್ರಾಮ ಪಂಚಾಯಿತಿ ಸದಸ್ಯರಿಗೆ ತಲೆನೋವಾಗಿದೆ. ನಮ್ಮ ಸಂಘದಿಂದ ಸಾಕಷ್ಟು ಬಾರಿ ಸರ್ಕಾರಕ್ಕೆ ಮನವಿ ಸಲ್ಲಿಸಿದರು, ಯಾವುದೇ ಪ್ರಯೋಜನವಾಗಿಲ್ಲ. ಮಳೆಗಾಲದಲಂತೂ ಜನರು ಮತ್ತು ಜಾನುವಾರುಗಳು ರಸ್ತೆಯಲ್ಲಿ ಓಡಾಡುವುದೇ ಕಷ್ಟವಾಗಿಬಿಟ್ಟಿದೆ.
>
> » **ಕೆ.ಬಿ.ಮನುಕುಮಾರ್ ಅಧ್ಯಕ್ಷರು, ತಾಲೂಕು ಗ್ರಾಮ ಪಂಚಾಯಿತಿ ಸದಸ್ಯರ ಕ್ಷೇಮಾಭಿವೃದ್ಧಿ ಸಂಘ, ಹೊಸದುರ್ಗ**

> ತಾಲೂಕಿನಲ್ಲಿ ಈಗಾಗಲೇ ಮನೆ ಮನೆ ಗಂಗೆ ಯೋಜನೆಯೂ ಸುಮಾರು 110 ಗ್ರಾಮಗಳಲ್ಲಿ ಪೂರ್ಣಗೊಂಡಿದ್ದು, ಇನ್ನೂ ಬಹಳಷ್ಟು ಹಳ್ಳಿಗಳಲ್ಲಿ ಕಾಮಗಾರಿ ನಡೆಯಬೇಕಿದೆ. ಒಂದು ಕಾಮಗಾರಿ ಆರಂಭವಾಗಿ 6 ತಿಂಗಳೊಳಗೆ ಪೂರ್ಣಗೊಳ್ಳಬೇಕೆಂಬ ಸರ್ಕಾರದ ನಿಯಮವಿದ್ದರೂ ಕೂಡ ಕೆಲಸ ಮಾಡುವ ಸ್ಥಳದಲ್ಲಿ ಸ್ಥಳೀಯ ಜನರ ಸಮಸ್ಯೆ ಮತ್ತು ಎದುರಾಗುವ ಇನ್ನಿತರ ಸಮಸ್ಯೆಗಳನ್ನು ಬಗೆಹರಿಸಿಕೊಂಡು ಕಾಮಗಾರಿ ಪೂರ್ಣಗೊಳಿಸಲು ವಿಳಂಬವಾಗುತ್ತಿದೆ.
>
> » **ಸುನೀಲ್ ಕುಮಾರ್ ಇಒ, ತಾ.ಪಂ.ಹೊಸದುರ್ಗ**

## ಪ್ರಮುಖ ಸುದ್ದಿ

# ಕೇಂದ್ರ ಒಪ್ಪಿಗೆ ಕೊಟ್ಟರೆ ನಾಳೆಯೇ ಕಳಸ ಯೋಜನೆ ಜಾರಿ

**ಕೃಷಿಕರ ನಗರ ಪ್ರದೇಶದ ವಲಸೆಯಿಂದ ಕೃಷಿಗೆ ಪೆಟ್ಟು: ಸಿ.ಎಂ –ಒಣ ಬೇಸಾಯ ಮಾಡುವ ರೈತರೇ ಹೆಚ್ಚು: ಸಮಗ್ರ ಕೃಷಿ–ಕೃಷಿಕರ ಪ್ರಗತಿಗೆ ಕ್ರಮ**

**ರೈತರು, ಶಿಕ್ಷಕರು, ಸೈನಿಕರು ದೇಶದ ರಕ್ಷಕರು –ಕೇಂದ್ರ ಸರ್ಕಾರ ಒಪ್ಪಿಗೆ ಕೊಟ್ಟರೆ ನಾಳೆಯೇ ಮಹದಾಯಿ ಯೋಜನೆ ಜಾರಿ: ಸಿ.ಎಂ ಪುನರುಚ್ಚಾರ**



» **ಬೆಳಗಾವಿ**

ರೈತರು, ಶಿಕ್ಷಕರು, ಸೈನಿಕರು ದೇಶದ ರಕ್ಷಕರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಕೃಷಿ ಇಲಾಖೆ ಸಹಾಯಧನದ ಅಡಿಯಲ್ಲಿ ಸುಮಾರು 400 ಕೋಟಿ ವೆಚ್ಚದ ಕೃಷಿ ಯಂತ್ರ ಮತ್ತು ಸಲಕರಣೆಗಳನ್ನು ರೈತರಿಗೆ ವಿತರಿಸಿ ಮಾತನಾಡಿದರು.

ಕೃಷಿಕರಿಗೆ ಶೇ40ರಷ್ಟು, ಪರಿಶಿಷ್ಟ ಸಮಾಜದ ಕೃಷಿಕರಿಗೆ ಶೇ50 ರಷ್ಟು ರಿಯಾಯ್ತಿಯಲ್ಲಿ ಕೃಷಿ ಯಂತ್ರೋಪಕರಣಗಳನ್ನು ವಿತರಣೆ ಮಾಡಿದ್ದೇವೆ. ಕೃಷಿ ಕಾರ್ಮಿಕರ ಕೊರತೆಯಿಂದಾಗಿ ಕೃಷಿ ಯಂತ್ರಗಳ ಮೇಲಿನ ಅವಲಂಭನೆ ಹೆಚ್ಚಾಗಿದೆ. ಹೀಗಾಗಿ ರಿಯಾಯ್ತಿ ಬೆಲೆಯಲ್ಲಿ ಕೃಷಿಯಂತ್ರಗಳ ವಿತರಣೆ ಸರ್ಕಾರ ಮಾಡುತ್ತಿದೆ ಎಂದರು.

ಕೃಷಿಭಾಗ್ಯವನ್ನು ಒಣಕೃಷಿ ಬೆಳೆಗಾರರಿಗೆ ಜಾರಿಗೆ ತಂದಿದ್ದೇವೆ. ಕಳೆದ ವರ್ಷ 25 ಸಾವಿರಕ್ಕೂ ಹೆಚ್ಚು ಕೃಷಿ ಹೊಂಡ ಮಾಡಿಸಿದ್ದೇವೆ. ಈ ವರ್ಷ ಇದು ಇನ್ನೂ ಹೆಚ್ಚಾಗುತ್ತದೆ. ಕೃಷಿಹೊಂಡ ಬಹಳ ಉಪಯುಕ್ತ ಯೋಜನೆಯಾಗಿದೆ ಎಂದು ತಜ್ಞರು ವರದಿ ನೀಡಿದ್ದಾರೆ ಎಂದರು.

ಈಗ ಆಹಾರ ಉತ್ಪಾದನೆಯಲ್ಲಿ ಸ್ವಾವಲಂಭಿಯಾಗಿದ್ದೇವೆ. ನಮ್ಮ ಸರ್ಕಾರ ಬಂದ ಮೇಲೆ ಆಹಾರ ಉತ್ಪಾದಕರಾದ ನಿಮ್ಮ ಕಾರಣದಿಂದ 10 ಕೆಜಿ ಅಕ್ಕಿ ಕೊಡುವ ಅನ್ನಭಾಗ್ಯ ಯೋಜನೆಯನ್ನು ಕೊಡಲು ಶುರು ಮಾಡಿದೆವು ಎಂದರು. ನೀರಾವರಿ ಯೋಜನೆಗಳಿಗೆ ನಮ್ಮ ಸರ್ಕಾರ 23 ಸಾವಿರ ಕೋಟಿ ಖರ್ಚು ಮಾಡುತ್ತಿದೆ. ಭದ್ರಾ ಮೇಲ್ದಂಡೆ ಯೋಜನೆಗೆ ಇವತ್ತಿನವರೆಗೂ ಒಂದು ಪೈಸೆಯನ್ನೂ ಕೇಂದ್ರ ಸರ್ಕಾರ ಕೊಟ್ಟಿಲ್ಲ. ಮಹದಾಯಿ, ಮೇಕೆದಾಟು ಯೋಜನೆಗೆ ಕೇಂದ್ರ ಸರ್ಕಾರ ಒಪ್ಪಿಗೆಯನ್ನೇ ಕೊಡುತ್ತಿಲ್ಲ. ಕೇಂದ್ರ ಸರ್ಕಾರ ಒಪ್ಪಿಗೆ ಕೊಟ್ಟರೆ ತಕ್ಷಣ ಈ ಎಲ್ಲಾ ನೀರಾವರಿ ಯೋಜನೆಗಳನ್ನು ಆರಂಭಿಸಲು ಸರ್ಕಾರ ಸಿದ್ಧವಿದೆ ಎಂದು ಘೋಷಿಸಿದರು.

### ಎಲ್ಲಾ ಪೌರ ಕಾರ್ಮಿಕರ ಸೇವೆ ಕಾಯಂ: ಸಿ.ಎಂ ಸಿದ್ದರಾಮಯ್ಯ




» **ಬೆಳಗಾವಿ**

ಎಲ್ಲಾ ಪೌರ ಕಾರ್ಮಿಕರ ಸೇವೆಯನ್ನು ಕಾಯಂಗೊಳಿಸುವ ಕಾರ್ಯ ನಡೆಯುತ್ತಿದೆ ಎಂದು ಸಿ.ಎಂ ಸಿದ್ದರಾಮಯ್ಯ ಅವರು ನುಡಿದರು. ಸ್ಮಾರ್ಟ್ ಸಿಟಿ ಅನುದಾನದ ಅಡಿಯಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಬೆಳಗಾವಿಯ ಟಿಳಕವಾಡಿಯಲ್ಲಿ ಆಧುನಿಕ ಸೌಲಭ್ಯಗಳುಳ್ಳ ಬಹುಮಹಡಿ ಕಲಾ ಮಂದಿರವನ್ನು ಲೋಕಾರ್ಪಣೆಗೊಳಿಸಿದ ಬಳಿಕ ಮಾತನಾಡಿದರು. ಈಗಾಗಲೇ ಗುತ್ತಿಗೆ ನೌಕರರನ್ನು ಕನಿಷ್ಠ ವೇತನ ಅಡಿಯಲ್ಲಿ ತರಲಾಗಿದೆ. ಇದನ್ನು ಮಾಡಿದ್ದು ನಮ್ಮ ಸರ್ಕಾರವೇ, ಈಗ ಕಾಯಂ ಮಾಡುವುದೂ ಕೂಡ ನಮ್ಮ ಸರ್ಕಾರವೇ ಎಂದು ತಿಳಿಸಿದರು. ಬೆಳಗಾವಿಯಲ್ಲಿ ಸ್ಮಾರ್ಟ್ ಸಿಟಿ ಯೋಜನೆ ಅಡಿಯಲ್ಲಿ 150 ಕಾರ್ಯಕ್ರಮಗಳನ್ನು ಕೈಗೆತ್ತಿಕೊಂಡು ಇದರಲ್ಲಿ 102 ಪೂರ್ಣಗೊಂಡಿವೆ. ಉಳಿದವು ಸದ್ಯದಲ್ಲೇ ಪೂರ್ಣಗೊಳ್ಳಲಿವೆ ಎಂದರು. ಸ್ಮಾರ್ಟ್ ಸಿಟಿ ಯೋಜನೆಯಲ್ಲಿ 6928 ಕೋಟಿ ಮೊತ್ತದ ಕೆಲಸಗಳು ನಡೆಯುತ್ತಿವೆ ಎಂದರು. ಬೆಳಗಾವಿಯ ಸಮಗ್ರ ಅಭಿವೃದ್ಧಿಗೆ ನಮ್ಮ ಸರ್ಕಾರ ನಿರಂತರವಾಗಿ ಯೋಜನೆ, ಕಾರ್ಯಕ್ರಮಗಳನ್ನು ರೂಪಿಸಿ ಜಾರಿಗೆ ತರುತ್ತಿದೆ ಎಂದರು.

## ಫಾಸ್ಟ್ ನ್ಯೂಸ್

### 21 ರಂದು ಪೂರ್ವಭಾವಿ ಸಭೆ

» ಚಿತ್ರದುರ್ಗ

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಏ.21 ರಂದು ವಿವಿಧ ಜಯಂತಿಗಳ ಆಚರಣೆ ಕುರಿತು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆಗಳು ಜರುಗಲಿವೆ. ಬೆಳಿಗ್ಗೆ 11 ಗಂಟೆಗೆ ಶ್ರೀ ಬಸವ ಜಯಂತಿ, 11:30 ಗಂಟೆಗೆ ಶ್ರೀ ಶಂಕರಾಚಾರ್ಯರರ ಜಯಂತಿ ಹಾಗೂ ಮಧ್ಯಾಹ್ನ 12 ಗಂಟೆಗೆ ಶ್ರೀ ಭಗೀರಥ ಜಯಂತಿ ಆಚರಿಸುವ ಕುರಿತು ಪೂರ್ವಭಾವಿ ಸಭೆಗಳು ನಡೆಯಲಿದೆ. ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ಹಾಗೂ ಸಮುದಾಯದ ಮುಖಂಡರುಗಳು ತಪ್ಪದೇ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ, ಜಯಂತಿಗಳ ಆಚರಣೆ ಕುರಿತು ಸೂಕ್ತ ಸಲಹೆ ಸೂಚನೆಗಳನ್ನು ನೀಡುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ

» ಚಿತ್ರದುರ್ಗ

ಚಿತ್ರದುರ್ಗ ಪಶುಪಾಲನ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ವತಿಯಿಂದ ಏಪ್ರಿಲ್ 28 ಹಾಗೂ 29 ರಂದು ಆಧುನಿಕ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ನಗರದ ಪಾಲಿಕ್ಲಿನಿಕ್ ಆವರಣದಲ್ಲಿರುವ ಪಶುಪಾಲನ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ತರಬೇತಿ ನಡೆಯಲಿದ್ದು, 25 ಜನರಿಗೆ ತರಬೇತಿ ನೀಡಲಾಗುವುದು. ಆಸಕ್ತ ರೈತರು ಆಧಾರ್ ಕಾರ್ಡ್ ಪ್ರತಿ, 3 ಪಾಸ್ ಪೋರ್ಟ್‌ಸೈಜ್ ಪೋಟೋ, ಬ್ಯಾಂಕ್ ಪಾಸ್‌ಬುಕ್ ಪ್ರತಿ, ಪ.ಜಾತಿ ಮತ್ತು ಪ.ಪಂಗಡದವರು ಜಾತಿ ಪ್ರಮಾಣ ಪತ್ರದ ಪ್ರತಿದೊಂದಿಗೆ ನೊಂದಾಯಿಸಿಕೊಳ್ಳಬಹುದು. ತರಬೇತಿ ವೇಳೆ ಯಾವುದೇ ಪ್ರೋತ್ಸಾಹಧನ ನೀಡುವುದಿಲ್ಲ. ಹೆಚ್ಚಿನ ವಿವರಗಳಿಗಾಗಿ ಮೊಬೈಲ್ ಸಂಖ್ಯೆ 9482943111, 9886002248 ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಿದೆ.

### 6ನೇ ತರಗತಿಗೆ ದಾಖಲಾತಿ: ಅರ್ಜಿ ಆಹ್ವಾನ

» ಚಿತ್ರದುರ್ಗ

2025-26ನೇ ಸಾಲಿಗೆ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ ಸಾಮಾಜಿಕವಾಗಿ, ಆರ್ಥಿಕವಾಗಿ ಹಿಂದುಳಿದ ಪರಿಶಿಷ್ಟ ವರ್ಗದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ನಿಯಮಾನುಸಾರ ಅರ್ಹತಾ ಪರೀಕ್ಷೆ ಮೂಲಕ 6ನೇ ತರಗತಿಗೆ ದಾಖಲಾತಿ ಮಾಡಿಕೊಂಡು ಉತ್ತಮ ಗುಣಮಟ್ಟದ ಶಿಕ್ಷಣ ನೀಡಲು ಜಿಲ್ಲೆಯಲ್ಲಿರುವ ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶ ನೀಡಲು ಜಿಲ್ಲೆಯ ಪ್ರತಿಭಾವಂತ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಮೇ 3 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಅರ್ಹ ವಿದ್ಯಾರ್ಥಿಗಳು ಆಯಾ ತಾಲ್ಲೂಕಿನ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗಳಿಂದ ಅರ್ಜಿಗಳನ್ನು ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಆಯಾ ತಾಲ್ಲೂಕು ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಗಳಿಗೆ ಸಲ್ಲಿಸುವುದು. ಇದೇ ಏಪ್ರಿಲ್ 19 ರಿಂದ ಅರ್ಜಿ ಸಲ್ಲಿಕೆ ಪ್ರಾರಂಭವಾಗಲಿದ್ದು, ಮೇ 03 ಸಂಜೆ 5 ಅರ್ಜಿ ಸಲ್ಲಿಸಲು ಕೊನೆಯ ದಿನ. ಅಪೂರ್ಣಗೊಂಡ ಹಾಗೂ ಅವಧಿ ಮೀರಿ ಬಂದ ಅರ್ಜಿಗಳನ್ನು ಕಡ್ಡಾಯವಾಗಿ ತಿರಸ್ಕರಿಸಲಾಗುವುದು. ಷರತ್ತು: 2025-26ನೇ ಸಾಲಿನ ಪ್ರತಿಷ್ಠಿತ ಶಾಲೆಗಳಿಗೆ ಪ್ರತಿಭಾವಂತ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳನ್ನು ಉಚಿತವಾಗಿ ಅರ್ಹತಾ ಪರೀಕ್ಷಾ ಮೂಲಕ ಆಯ್ಕೆ ಮಾಡಲಾಗುವುದು. 5ನೇ ತರಗತಿಯಲ್ಲಿ ಶೇ.60ಕ್ಕಿಂತ ಹೆಚ್ಚು ಅಂಕಗಳಿಸಿದ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಆಯ್ಕೆಗೊಂಡ ವಿದ್ಯಾರ್ಥಿಗಳನ್ನು ಜಿಲ್ಲೆಯ ಪ್ರತಿಷ್ಠಿತ ಶಾಲೆಗಳಲ್ಲಿ ದಾಖಲು ಮಾಡಲಾಗುವುದು. 6ನೇ ತರಗತಿಗೆ ಮಾತ್ರ ಜಿಲ್ಲೆಗೆ ನಿಗಧಿ ಪಡಿಸಿರುವ ಗುರಿಗೆ ಅನುಗುಣವಾಗಿ ನಿಯಮಾನುಸಾರ ಪ್ರವೇಶ ಅವಕಾಶವನ್ನು ನೀಡಲಾಗುವುದು. ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಪರಿಶಿಷ್ಟ ವರ್ಗಕ್ಕೆ ಸೇರಿದವರಾಗಿದ್ದು, ಕುಟುಂಬದ ವಾರ್ಷಿಕ ವರಮಾನ ರೂ.2.00 ಲಕ್ಷಗಳ ಮಿತಿಯೊಳಗೆ ಇರಬೇಕು. ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಹಾಗೂ ದೃಢೀಕೃತ ಅಂಕಪಟ್ಟಿಯನ್ನು ಅರ್ಜಿ ಜೊತೆ ಕಡ್ಡಾಯವಾಗಿ ಸಲ್ಲಿಸುವುದು. ಮುಖ್ಯೋಪಾಧ್ಯಾಯರಿಂದ ಕಡ್ಡಾಯವಾಗಿ ಶೇಕಡವಾರು ನಮೂದಿಸಿದ ಅಂಕಪಟ್ಟಿಯನ್ನು ಮಾತ್ರ ಪರಿಗಣಿಸಲಾಗುವುದು, ಅಂಕಪಟ್ಟಿಯಲ್ಲಿ ಗ್ರೇಡ್ ಅನ್ನು ನಮೂದಿಸಿದ್ದಲ್ಲಿ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ. ವಿದ್ಯಾರ್ಥಿಗಳ ಶುಲ್ಕ ಮತ್ತು ನಿರ್ವಹಣಾ ವೆಚ್ಚವನ್ನು ಸರ್ಕಾರ ನಿಗಧಿ ಪಡಿಸಿದ ದರದಲ್ಲಿ ನೀಡಲಾಗುವುದು. ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಚಿತ್ರದುರ್ಗ ಜಿಲ್ಲೆ ವ್ಯಾಪ್ತಿಗೆ ಒಳಪಟ್ಟಿರಬೇಕು. ಪೋಷಕರು ಒಂದು ಬಾರಿ ಶಾಲೆಯನ್ನು ಆಯ್ಕೆಗೊಳಿಸಿದ ಮೇಲೆ ಅದೇ ಶಾಲೆಗೆ ದಾಖಲಾತಿ ಮಾಡಲಾಗುವುದು ಯಾವುದೇ ಕಾರಣಕ್ಕೂ ಶಾಲೆಯನ್ನು ಬದಲಾಯಿಸುವುದಿಲ್ಲ. ಹಾಗೂ ಆಯ್ಕೆಯಾದ ವಿದ್ಯಾರ್ಥಿಯು ಆಯ್ಕೆಯಾದ ಶಾಲೆಯಲ್ಲಿ ಯಾವ ಪಠ್ಯಕ್ರಮ ಇರುತ್ತದೆಯೋ ಅದೇ ಪಠ್ಯಕ್ರಮದಲ್ಲಿ ವಿದ್ಯಾಬ್ಯಾಸ ಮಾಡುವುದು. ಈ ಷರತ್ತಿನಲ್ಲಿ ಯಾವುದೇ ಬದಲಾವಣೆ ಮಾಡಲಾಗುವುದಿಲ್ಲ.

### ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಚಾಲನೆ

# ಬಸವಾದಿ ಶರಣರ ವೈಭವ ರಥಯಾತ್ರೆ

» ಚಿತ್ರದುರ್ಗ

ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ ಬದುಕು, ಸಂದೇಶ ಮತ್ತು ಚಿಂತನೆಗಳನ್ನು ಪ್ರಚುರ ಪಡಿಸುವ ನಿಟ್ಟಿನಲ್ಲಿ ರಾಜ್ಯಾದ್ಯಂತ ಹಮ್ಮಿಕೊಂಡಿರುವ ಅನುಭವ ಮಂಟಪ-ಬಸವಾದಿ ಶರಣರ ವೈಭವ ರಥಯಾತ್ರೆಗೆ ಭಾನುವಾರ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಚಾಲನೆ ನೀಡಿದರು.





ನಗರದ ಜಿಲ್ಲಾಧಿಕಾರಿ ಕಚೇರಿ ಸಮೀಪದ ಒನಕೆ ಓಬವ್ವ ವೃತ್ತದಲ್ಲಿ ರಥಯಾತ್ರೆಯನ್ನು ವಿವಿಧ ಜಾನಪದ ಕಲಾಮೇಳಗಳೊಂದಿಗೆ ಸ್ವಾಗತಿಸಿ, ಜಿಲ್ಲಾಡಳಿತದ ವತಿಯಿಂದ ಬಸವಾದಿ ಶರಣರಿಗೆ ಪುಷ್ಪನಮನ ಸಲ್ಲಿಸಿ, ಗೌರವ ಸಮರ್ಪಿಸಲಾಯಿತು.

ಇದೇ ಏ.29 ಮತ್ತು 30ರಂದು ಬಾಗಲಕೋಟೆ ಜಿಲ್ಲೆಯ ಕೂಡಲ ಸಂಗಮದಲ್ಲಿ ಎರಡು ದಿನಗಳ ಕಾಲ ಆಯೋಜಿಸಿರುವ "ಅನುಭವ ಮಂಟಪ-ಬಸವಾದಿ ಶರಣ ವೈಭವ" ಕಾರ್ಯಕ್ರಮದ ಅಂಗವಾಗಿ ರಥಯಾತ್ರೆ ಆಯೋಜಿಸಲಾಗಿದ್ದು, ತುಮಕೂರಿನಿಂದ ಚಿತ್ರದುರ್ಗ ಜಿಲ್ಲೆಗೆ ಆಗಮಿಸಿದ ರಥಯಾತ್ರೆಯು ಶನಿವಾರ ರಾತ್ರಿ ಚಿತ್ರದುರ್ಗ ನಗರಲ್ಲಿ ವಾಸ್ತವ್ಯ ಮಾಡಿತು. ನಂತರ ಭಾನುವಾರ ದಾವಣಗೆರೆ ಜಿಲ್ಲೆಗೆ ರಥಯಾತ್ರೆಯು ತೆರಳಿತು.


ಜಗತ್ತಿನ ಪ್ರಪ್ರಥಮ ಸಂಸತ್ತು ಅನುಭವ ಮಂಟಪ-ಬಸವಾದಿ ಶರಣರ ವೈಭವ ರಥದಲ್ಲಿ ಬಸವಣ್ಣ ಅವರೊಂದಿಗೆ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್, ಭಗವಾನ್ ಗೌತಮ ಬುದ್ಧ, ಶಿವಶರಣೆ ಅಕ್ಕಮಹಾದೇವಿ, ಸಂತ ಶಿಶುನಾಳ ಶರೀಪ, ಗುರುನಾನಕ್, ಭಗವಾನ್ ಮಹಾವೀರ, ನಾರಾಯಣ ಗುರು, ಯೇಸು ಕ್ರಿಸ್ತರ ಪ್ರತಿಮೆಗಳನ್ನು ಅಳವಡಿಸಲಾಗಿದೆ.

ಈ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಮೆಹಬೂಬ್ ಜಿಲಾನಿ ಖುರೇಷಿ, ತಹಶೀಲ್ದಾರ್ ಗೋವಿಂದರಾಜು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ್, ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಕೆ.ಎಂ.ಶಿವಸ್ವಾಮಿ, ಮುಖಂಡರಾದ ಮಹಡಿ ಶಿವಮೂರ್ತಿ, ರೀನಾ ವೀರಭದ್ರಪ್ಪ, ಕೆಇಬಿ ಷಣ್ಮುಖಪ್ಪ, ಕೆ.ಸಿ.ನಾಗರಾಜು, ಚಿನ್ಮಾಯಿನಂದ, ಶಶಿಧರ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

# ರಾಷ್ಟ್ರಕವಿ ಕುವೆಂಪುರವರ ಮಂತ್ರಮಾಂಗಲ್ಯದ ಮೂಲಕ ಸುಂದರ ಬದುಕು ಕಟ್ಟಿಕೊಳ್ಳಿ: ಶಾಸಕ

» ಚಳ್ಳಕೆರೆ

ಆಡಂಬರದ, ದುಂದುವೆಚ್ಚದ ಮದುವೆಗಳಿಗೆ ಕಡಿವಾಣ ಹಾಕಿ ಮಂತ್ರ ಮಾಂಗಲ್ಯ ರೂಪದಲ್ಲಿ ಸರಳ ವಿವಾಹದಿಂದ ಉತ್ತಮ ಬದುಕು ರೂಪಿಸಿಕೊಂಡು ಎಲ್ಲರಿಗೂ ಮಾದರಿಯಾಗಬೇಕೆಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.




ಅವರು, ತಾಲ್ಲೂಕಿನ ಪಿ.ಓಬನಹಳ್ಳಿ ಗ್ರಾಮದಲ್ಲಿ ಏರ್ಪಡಿಸಿದ್ದಸಂದೀಪ್‌ಮತ್ತುಕೆ.ಸಿ.ರೋಜಾರವರ ಮಂತ್ರ ಮಾಂಗಲ್ಯ ವಿವಾಹ ಕಾರ್ಯಕ್ರಮದಲ್ಲಿ ಭಾಗವಹಿಸಿ ನೂತನ ವಧುವರರನ್ನು ಆಶೀರ್ವಾದಿಸಿ ಮಾತನಾಡಿದರು. ರಾಷ್ಟ್ರಕವಿ ಕುವೆಂಪುರವರು ಸಾಹಿತ್ಯವಷ್ಟೇಯಲ್ಲದೆ, ಇಂತಹ ಸಾಮಾಜಿಕ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಸಮಾಜಕ್ಕೆ ಮಾದರಿಯಾಗಿದ್ದಾರೆಂದರು.

ಕವಿ, ಚಿಂತಕ, ಬರಹಗಾರ ಡಾ.ವಡ್ಡಗೆರೆನಾಗರಾಜಯ್ಯ ಮಾತನಾಡಿ, ಕುವೆಂಪುರವರ ಮಂತ್ರಮಾಂಗಲ್ಯ ಕಾರ್ಯಕ್ರಮ ಎಲ್ಲಾ ವರ್ಗ ಜನರ ವಿಶ್ವಾಸವನ್ನು ಗಳಿಸುವಲ್ಲಿ ಯಶಸ್ವಿಯಾಗಿದೆ. ಪ್ರತಿಯೊಬ್ಬರೂ ತಮ್ಮ ಕುಟುಂಬದ ವಿವಾಹಕಾರ್ಯವನ್ನು ಅದ್ದೂರಿ, ಆಡಂಬರದಿಂದ ಮಾಡುತ್ತಾರೆ ಅಲ್ಲಿ ಸಾಹಿತ್ಯದ ಪರಿಕಲ್ಪನೆ ಇರುವುದಿಲ್ಲ. ಆದರೆ, ಮಂತ್ರಮಾಂಗಲ್ಯದ ಮೂಲಕ ರಾಷ್ಟ್ರಕವಿ ಕುವೆಂಪುರವರಿಗೆ ಗೌರವ ಸಲ್ಲಿಸಿದಂತಾಗುತ್ತದೆ. ಇಂತಹ ವಿವಾಹನ ಕಾರ್ಯಗಳು ಸಾಮಾಜಿಕ ಬದಲಾವಣೆಯ ಸಂಕೇತವಾಗಿವೆ ಎಂದರು.

ಕಾರ್ಯಕ್ರಮದಲ್ಲಿ ದಲಿತ ಮುಖಂಡರಾದ ಟಿ.ಡಿ.ರಾಜಗಿರಿ, ಬಿ.ಪಿ.ತಿಪ್ಪೇಸ್ವಾಮಿ, ಪತ್ರಕರ್ತ ಕೊರ್ಲಕುಂಟೆತಿಪ್ಪೇಸ್ವಾಮಿ, ಹುಚ್ಚವ್ವನಹಳ್ಳಿ ವೆಂಕಟೇಶ್, ಏಕಾಂತಪ್ಪ, ಗಿರಿಜಮ್ಮ, ಬಿ.ಲೋಕೇಶ್, ಹನುಮಂತರಾಯಪ್ಪ, ಚನ್ನಪ್ಪ, ಭಾಗ್ಯಮ್ಮ, ಗುರುಸ್ವಾಮಿ, ವೆಂಕಟೇಶ್ ಉಪಸ್ಥಿತರಿದ್ದರು.

### ಅಂಬೇಡ್ಕರ್ ಕಲಿಯುಗದ ದೇವರು- ಶಾಸಕ ಟಿ.ರಘುಮೂರ್ತಿ



» ಪರಶುರಾಂಪುರ

ವಿಶ್ವ ಮೆಚ್ಚುವ ಸಂವಿಧಾನದ ರಚನೆ ಜತೆಗೆ ಕಲಿಯುಗದ ದೇವರಾಗಿದ್ದಾರೆ ಡಾ.ಬಿ.ಆರ್ ಅಂಬೇಡ್ಕರ್ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.ಸಮೀಪದ ಜೆ.ಜೆ ಕಾಲೋನಿಯ ಯುವ ಬಳಗದವರಿಂದ ಆಯೋಜಿಸಿದ್ದ ಡಾ.ಬಿ.ಆರ್ ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು.ಅಂಬೇಡ್ಕರ್ ತತ್ವಾದರ್ಶಗಳನ್ನು ಯುವಕರು ಮೈಗೂಡಿಸಿಕೊಂಡು ಸಂವಿಧಾನಕ್ಕೆ ಗೌರವ ಕೊಡೋಣ ಎಂದರು.ಗ್ಯಾರಂಟಿ ಯೋಜನೆಗಳ ಪ್ರಾದಿಕಾರದ ಜಿಲ್ಲಾ ಸದಸ್ಯ ಚೌಳೂರು ಪ್ರಕಾಶ್ ಮಾತನಾಡಿ, ಜೀವನದುದ್ದಕ್ಕೂ ತಾರತಮ್ಯ/ಜಾತಿ ವ್ಯವಸ್ಥೆ ವಿರುದ್ಧ ನಿರಂತರವಾಗಿ ಹೋರಾಟ ನಡೆಸುತ್ತಲೇ ಬಂದಂತಹ ಬಾಬಾ ಸಾಹೇಬರು ಎಲ್ಲರಿಗೂ ಸಮಾನ ಹಕ್ಕುಗಳು ಮತ್ತು ಅವಕಾಶಗಳು ಸಿಗಬೇಕೆಂದು ಅಚಲ ಸಂಕಲ್ಪ ಹೊಂದಿದ್ದರು ಹಾಗೂ ನಮ್ಮೆಲ್ಲರ ರಕ್ಷಣೆಯಾಗಿರು ಸಂವಿಧಾನವೇ ಅದಕ್ಕೆ ಗೌರವ ಜತೆ ಅಂಬೇಡ್ಕರ್ ಅವರ ಹಾದಿಯಲ್ಲೇ ನಡೆಯೋಣ ಎಂದರು. ಕಾಂಗ್ರೆಸ್ ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಚೌಳೂರು ಪ್ರಕಾಶ್, ಉದ್ಯಮಿ ಡಿ.ಟಿ ಶ್ರೀನಿವಾಸ್, ಗ್ರಾಪಂ ಮಾಜಿ ಅಧ್ಯಕ್ಷ ಹಾಲಿ ಸದಸ್ಯ ಬಿ.ಆನಂದ ಕುಮಾರ್, ಗ್ರಾಪಂ ಮಾಜಿ ಅಧ್ಯಕ್ಷ ಡಿ. ಚೌಡಪ್ಪ. ಗ್ರಾಪಂ ಸದಸ್ಯೆ ಶ್ರೀದೇವಿ ಪ್ರಕಾಶ್. ಗ್ರಾಪಂ ಸದಸ್ಯರಾದ ಲಿಂಗರಾಜ್, ಕುಮಾರಸ್ವಾಮಿ, ವಿ.ಜಗಲೂರುಸ್ವಾಮಿ, ಮಂಜುನಾಥ್, ತಾಲ್ಲೂಕು ಪಂಚಾಯತ್ ಕೆಡಿಪಿ ನಾಮ ನಿರ್ದೇಶನ ಸದಸ್ಯರಾದ ಬಸವರಾಜ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಶಶಿಧರ, ಮುಖಂಡರುಗಳಾದ ಪ್ರಕಾಶ್, ಚೌಡಪ್ಪ, ತಿಪ್ಪೇಸ್ವಾಮಿ, ಹನುಮಂತರಾಯ, ಜಯಣ್ಣ, ದೇವಣ್ಣ, ನಿಂಗಪ್ಪ, ವೀರಣ್ಣ, ಮುಖಂಡರು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಸೇರಿದಂತೆ ಚೌಳೂರು ಜೆ.ಜೆ ಕಾಲೋನಿ, ಗ್ರಾಮಸ್ಥರು ಇದ್ದರು.

## ಬೆಂಗಳೂರಿನಲ್ಲಿ ರಕ್ತದ ಮಡುವಿನಲ್ಲಿ ನಿವೃತ್ತ ಡಿಜಿಪಿ ಓಂಪ್ರಕಾಶ್ ಮೃತ ದೇಹ

» ಬೆಂಗಳೂರು

ರಾಜ್ಯದ ನಿವೃತ್ತ ಪೊಲೀಸ್ ಮಹಾನಿರ್ದೇಶಕ ಓಂ ಪ್ರಕಾಶ್ ಅವರನ್ನು ಹತ್ಯೆ ಮಾಡಲಾಗಿದ್ದು, ನಗರದ ಎಚ್‌ಎಸ್‌ಆರ್ ಲೇಔಟ್‌ನ ಮನೆಯಲ್ಲಿ ಭಾನುವಾರ ರಕ್ತದ ಮಡುವಿನಲ್ಲಿ ಮೃತದೇಹ ಪತ್ತೆಯಾಗಿದೆ.



ಚಾಕುವಿನಿಂದ ಇರಿದು ಹತ್ಯೆಗೈದ ಸ್ಥಿತಿಯಲ್ಲಿ ಮೃತದೇಹ ಪತ್ತೆಯಾಗಿದೆ. ಈ ಕುರಿತು ಅವರ ಪತ್ನಿ ಪೊಲೀಸರಿಗೆ ಕರೆ ಮಾಡಿ ಮಾಹಿತಿ ನೀಡಿದ್ದಾರೆ. ಘಟನಾ ಸ್ಥಳಕ್ಕೆ ಹಿರಿಯ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ, ಪರಿಶೀಲನೆ ಕೈಗೊಂಡಿದ್ದಾರೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಸೆಂಟ್ ಜಾನ್ಸ್ ಆಸ್ಪತ್ರೆಗೆ ರವಾನಿಸಲಾಗಿದೆ.

ಬಿಹಾರದ ಚಂಪಾರಣ್ ಮೂಲದವರಾಗಿದ್ದ ಓಂ ಪ್ರಕಾಶ್ 1981ರ ಬ್ಯಾಚ್‌ನ ಐಪಿಎಸ್ ಅಧಿಕಾರಿಯಾಗಿದ್ದರು. ಕರ್ನಾಟಕ ಗೃಹರಕ್ಷಕದಳ, ಅಗ್ನಿಶಾಮಕದಳಗಳಲ್ಲಿ ಮಹಾನಿರ್ದೇಶಕರಾಗಿದ್ದ ಅವರು, 2015ರಿಂದ 2017ರವರೆಗೂ ರಾಜ್ಯ ಪೊಲೀಸ್ ಮಹಾ ನಿರ್ದೇಶಕರಾಗಿಯೂ ಸೇವೆ ಸಲ್ಲಿಸಿದ್ದರು.

## ಪ್ರಮುಖ ಸುದ್ದಿ

### ಶಿಕ್ಷಣದಿಂದ ಗುಲಾಮಗಿರಿ ತೊಡೆದು ಸ್ವಾಭಿಮಾನದ ಬದುಕು ಸಾಧ್ಯ-ಮುಖ್ಯಮಂತ್ರಿ ಸಿದ್ದರಾಮಯ್ಯ

# ಶಿಕ್ಷಣ, ಸಂಘಟನೆ: ಶೋಷಿತವರ್ಗಗಳಿಗೆ ಮೂಲಮಂತ್ರ

» ಬೆಳಗಾವಿ(ಚಿಕ್ಕೋಡಿ)

ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ರವರು ತಿಳಿಸಿದಂತೆ ಶಿಕ್ಷಣ, ಸಂಘಟನೆ , ಹೋರಾಟಗಳು ಶೋಷಿತವರ್ಗಗಳಿಗೆ ಮೂಲಮಂತ್ರವಾಗಬೇಕು. ಆಗಮಾತ್ರ ಗುಲಾಮಗಿರಿಯನ್ನು ನೀಗಿಸಿ, ಸ್ವಾಭಿಮಾನದ ಬದುಕು ಕಟ್ಟಿಕೊಳ್ಳಲು ಸಾಧ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.



ಅವರು ಇಂದು ಕರ್ನಾಟಕ ರಾಜ್ಯ ಗೊಲ್ಲ(ಯಾದವ) ಹಣಬರ ಸಂಘದ ಶತಮಾನೋತ್ಸವ ಹಾಗೂ ಶ್ರೀ ಯಾದವಾನಂದ ಸ್ವಾಮಿಗಳ 16 ನೇ ಪಟ್ಟಾಭಿಷೇಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಯಾದವ ಸಂಘಕ್ಕೆ ನೂರು ವರ್ಷಗಳು ಸಂದಿದ್ದು, ಸಮಾಜವನ್ನು ಸಂಘಟಿಸಿ ಮುಖ್ಯವಾಹಿನಿಗೆತರಲುಸಹಕಾರಿಯಾಗಿದೆ. ಎಲ್ಲ ಜಾತಿಗಳು ತಮ್ಮ ಕಸುಬಿನಿಂದಲೇ ನಿರ್ಮಾಣವಾಗಿವೆ. ಸಮಾಜವನ್ನು ವಿಭಜಿಸಲು, ಕಸುಬಿನ ಆಧಾರದಲ್ಲಿ ಜಾತಿಯೆಂದು ಕರೆಯಲಾಯಿತು. ಗೊಲ್ಲ ಜಾತಿಯಲ್ಲಿ ,ಕಾಡು ಗೊಲ್ಲ, ಅಡವಿ ಗೊಲ್ಲ ಸೇರಿದಂತೆ ಹಲವು ಉಪಜಾತಿಗಳಿವೆ ಎಂದರು.

**ಬಹುಸಂಖ್ಯಾತರು ಅಕ್ಷರಸಂಸ್ಕೃತಿಯಿಂದ ವಂಚಿತರು:** ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ರವರು ದೀನದಲಿತರು, ಹಿಂದುಳಿದ ವರ್ಗದವರು, ಅಲ್ಪಸಂಖ್ಯಾತರು, ಅವಕಾಶವಂಚಿತರು ಸಮಾಜದಲ್ಲಿ ಏಳಿಗೆಯನ್ನು ಕಾಣಲು ಶಿಕ್ಷಣ ಅತ್ಯಗತ್ಯ. ಶಿಕ್ಷಣ, ಸಂಘಟನೆ , ಹೋರಾಟ ಎಂಬ ಮೂರುಮಂತ್ರಗಳನ್ನು ಶೋಷಿತವರ್ಗಗಳಿಗೆ ಬೋಧಿಸಿದ್ದಾರೆ. ಸಮಾಜದಲ್ಲಿ ಅಸಮಾನತೆ ಸಾಕಷ್ಟಿದೆ. ಬಹುಸಂಖ್ಯಾತರು ಅಕ್ಷರಸಂಸ್ಕೃತಿಯಿಂದ ವಂಚಿತರಾಗಿದ್ದಾರೆ. ಮನುಸ್ಮೃತಿಯ ಪಾಲನೆಯಿಂದ, ಸಮಾಜದಲ್ಲಿ ತಂದು, ಬ್ರಾಹ್ಮಣರು, ವೈಶ್ಯರು,ಕ್ಷತ್ರಿಯರು ಹಾಗೂ ಶೂದ್ರರು ಎಂದು ಚತುರ್ವಣ ಪದ್ಧತಿಯನ್ನು ಜಾರಿಗೆ ತಂದು, ಶೂದ್ರರನ್ನು ಶಿಕ್ಷಣದ ಅವಕಾಶವನ್ನು ನೀಡಲಾಗಿರಲಿಲ್ಲ. ಆದ್ದರಿಂದ ಸಮಾನ ಅವಕಾಶ ಹಾಗೂ ಶಿಕ್ಷಣ ಪಡೆದ ವರ್ಗಗಳಷ್ಟೇ ಸಮಾಜದಲ್ಲಿ ಉನ್ನತಿಯನ್ನು ಕಾಣಲು ಸಾಧ್ಯವಾಯಿತು ಎಂದರು.

**ಸಮಾನತೆಯಿಂದ ಸಮಾಜದ ಅಭಿವೃದ್ಧಿ:** ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಅಸಮಾನತೆಯಿರುವ ವೈರುಧ್ಯದ ಸಮಾಜದಲ್ಲಿ ಕಾಲಿಡುತ್ತಿದ್ದೇವೆ ಎಂದು ಡಾ.ಬಿ.ಆರ್.ಅಂಬೇಡ್ಕರ್ ರವರು ತಿಳಿಸಿದ್ದರು. ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಸಮಾನತೆ ಬಂದಾಗ ಮಾತ್ರ ಸಮಾಜದ ಅಭಿವೃದ್ಧಿ ಸಾಧ್ಯ. ಸಮಾಜದಲ್ಲಿ ಅವಕಾಶ ವಂಚಿತರಿಗೆ, ಬಡವರಿಗೆ, ಶೋಷಿತರಿಗೆ ಸಮಾನ ಅವಕಾಶ ಹಾಗೂ ಸಮಾನತೆಯನ್ನು ಪಡೆಯಲು ಹೋರಾಟ ಮಾಡಬೇಕು ಎಂದರು.

1918ರಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ರವರು ಸರ್ಕಾರಿ ಉದ್ಯೋಗ ಹಾಗೂ ಶಿಕ್ಷಣದಲ್ಲಿ ವಿವಿಧ ಸಮುದಾಯಗಳಿಗೆ ಪ್ರಾತಿನಿಧ್ಯ ನೀಡುವ ಸಂಬಂಧ ಮಿಲ್ಲರ್ ಆಯೋಗವನ್ನು ರಚಿಸಿದರು. ಬ್ರಾಹ್ಮಣೇತರ ಸಮುದಾಯಗಳಿಗೆಶೇ.75ರಷ್ಟುಉದ್ಯೋಗ ಹಾಗೂ ಶಿಕ್ಷಣದಲ್ಲಿ ಮೀಸಲಾತಿಯನ್ನು ನೀಡಲಾಯಿತು. ನಂತರ ಮೀಸಲಾತಿ ಸೌಲಭ್ಯಕ್ಕಾಗಿ ಹಲವು ಆಯೋಗಗಳನ್ನು ರಚಿಸಲಾಗಿದೆ. ಶಿಕ್ಷಣ ಪಡೆಯದಿದ್ದರೆ ಗುಲಾಮಗಿರಿ ಹೆಚ್ಚಲಿದ್ದು, ಸ್ವಾಭಿಮಾನದ ಬದುಕು ಸಾಧ್ಯವಾಗುವುದಿಲ್ಲ. ಶಿಕ್ಷಣ ಪಡೆದಿದ್ದರಿಂದ ಮಾತ್ರ ಮುಖ್ಯಮಂತ್ರಿಯ ಹುದ್ದೆಗೇರಲು ಸಾಧ್ಯವಾಯಿತು ಎಂದು ಮುಖ್ಯಮಂತ್ರಿಗಳು ತಮ್ಮ ಅನುಭವವನ್ನು ಹಂಚಿಕೊಳ್ಳುತ್ತಾ, ಶಿಕ್ಷಣದ ಮಹತ್ವವನ್ನು ಸಭಿಕರಿಗೆ ವಿವರಿಸಿದರು.

**ಸಮಾಜಕ್ಕೆ ಆರ್ಥಿಕ ಸಹಾಯ ನೀಡಲು ಸಿಎಂ ಭರವಸೆ:** ಗೊಲ್ಲ ಸಮಾಜದವರೂ ಸೇರಿದಂತೆ ಎಲ್ಲ ತಳಸಮುದಾಯದವರು ಉತ್ತಮ ಶಿಕ್ಷಣ ಪಡೆದು ವೈದ್ಯರು, ಐಪಿಎಸ್-ಐಎಎಸ್ ಅಧಿಕಾರಿಗಳು, ವಕೀಲರಾಗ ಬಹುದು. ಯಾದವ ಸಮುದಾಯಕ್ಕೆ ಅಭಿವೃದ್ಧಿ ನಿಗಮ ರಚಿಸುವ ಬೇಡಿಕೆಇದೆ. ಸಮಾಜದ ಮುಖಂಡರೊಂದಿಗೆ ಸಭೆ ನಡೆಸಿ, ಆರ್ಥಿಕ ಸಹಾಯ ನೀಡುವ ಬಗ್ಗೆ ತೀರ್ಮಾನ ಕೈಗೊಳ್ಳಲಾಗುವುದು. ಸಮಾಜದ ಸಂಘಟನೆಯತ್ತ ಯಾದವ ಸಮುದಾಯದ ಮುಖಂಡರು ಗಮನಹರಿಸಬೇಕು ಎಂದರು.

## ಫಾಸ್ಟ್ ನ್ಯೂಸ್

### ಕೊಪ್ಪಳ: ಮಕ್ಕಳ ಪಾಲನಾ ಸಂಸ್ಥೆಗಳ ಕಟ್ಟಡ ನಿರ್ಮಾಣ

» **ಕೊಪ್ಪಳ**

ಟಣಕನಕಲ್ಲ ಗ್ರಾಮದಲ್ಲಿ ಮಕ್ಕಳ ನ್ಯಾಯ(ಮಕ್ಕಳ ಪೋಷಣೆ ಮತ್ತು ರಕ್ಷಣೆ) ಕಾಯ್ದೆ–2015 ಮಿಷನ್ ವಾತ್ಸಲ್ಯದಡಿಯಲ್ಲಿ ಜಿಲ್ಲೆಯಲ್ಲಿ ನಿರ್ಮಾಣವಾಗುತ್ತಿರುವ ಮಕ್ಕಳ ಪಾಲನಾ ಕೇಂದ್ರಗಳಾದ ಸರಕಾರಿ ಬಾಲಕರ ಬಾಲಮಂದಿರ ಮತ್ತು ಬಾಲಕಿಯರ ಬಾಲಮಂದಿರ ಕಟ್ಟಡ ನಿರ್ಮಾಣ ಸ್ಥಳಕ್ಕೆ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರಗೌಡ ಜಿ.ರಾಮತ್ನಾಳ ಭೇಟಿ ನೀಡಿ, ಕಾಮಗಾರಿಯನ್ನು ವೀಕ್ಷಿಸಿದರು. ಮಕ್ಕಳ ಪಾಲನಾ ಕೇಂದ್ರಗಳಲ್ಲಿ ಪೋಷಣೆ ಮತ್ತು ರಕ್ಷಣೆ ಅವಶ್ಯವಿರುವ ಮಕ್ಕಳ, ಆರೈಕೆ ಮತ್ತು ರಕ್ಷಣೆ ಕೈಗೊಳ್ಳುತ್ತಿದ್ದು, ಜಿಲ್ಲೆಯಲ್ಲಿ ಪೋಷಣೆ ಮತ್ತು ರಕ್ಷಣೆ ಅವಶ್ಯವಿರುವ ಬಹಳಷ್ಟು ಮಕ್ಕಳು ಇದ್ದು, ಈ ಬಾಲಮಂದಿರಗಳು ಜಿಲ್ಲೆಗೆ ಅತ್ಯವಶ್ಯಕವಾಗಿವೆ. ಸದ್ಯ ಬಾಲಮಂದಿರಗಳು ಬಾಡಿಗೆ ಕಟ್ಟದಲ್ಲಿ ಕಾರ್ಯನಿರ್ವಹಿಸುತ್ತಿವೆ. ಇದನ್ನು ಗಮನಿಸಿ ಸರಕಾರವು ಎರಡು ಬಾಲ ಮಂದಿರಗಳ ನಿರ್ಮಾಣಕ್ಕೆ ಅನುದಾನ ಬಿಡುಗಡೆಗೊಳಿಸಿ ಮಂಜುರಾತಿ ಆದೇಶ ನೀಡಿದೆ. ಬಾಲಮಂದಿರಗಳ ನಿರ್ಮಾಣಕ್ಕೆ ಶಿಲಾನ್ಯಾಸವಾಗಿ ವರ್ಷಗಳು ಕಳೆದಿದ್ದು, ಕೇವಲ ಬಾಲಕರ ಬಾಲಮಂದಿರ ಕಟ್ಟಡವು ಬುನಾದಿ ಹಂತದಲ್ಲಿದೆ. ಬಾಲಕಿಯರ ಬಾಲಮಂದಿರವು ನಿರ್ಮಾಣ ಕಾರ್ಯ ಆರಂಭಿಸದಿರುವ ಬಗ್ಗೆ ತೀವ್ರ ಅಸಮಾದಾನವನ್ನು ವ್ಯಕ್ತಪಡಿಸಿದ ಅವರು, ಈ ಕಟ್ಟಡಗಳ ನಿರ್ಮಾಣ ಕಾಮಗಾರಿಯನ್ನು ಶೀಘ್ರವಾಗಿ ಆರಂಭಿಸಿ, ಉತ್ತಮ ಗುಣಮಟ್ಟದ ಕಟ್ಟಡವನ್ನು ನಿರ್ಮಾಣ ಮಾಡುವಂತೆ ಕೊಪ್ಪಳ ನಿರ್ಮಿತಿ ಕೇಂದ್ರದ ಸಹಾಯಕ ಅಭಿಯಂತರರಿಗೆ ಸೂಚಿಸಿದರು. ತಪ್ಪಿದಲ್ಲಿ ನಿರ್ಮಾಣ ಕಾಮಗಾರಿಯ ಗುತ್ತಿಗೆಯನ್ನು ರದ್ದುಪಡಿಸಿ, ಬೇರೆ ಸಂಸ್ಥೆಗೆ ನೀಡುವಂತೆ ಕೊಪ್ಪಳ ಜಿಲ್ಲಾಧಿಕಾರಿಗಳಿಗೆ ವರದಿ ನೀಡುವುದಾಗಿ ಎಚ್ಚರಿಸಿದರು. ಈ ಕಟ್ಟಡ ನಿರ್ಮಾಣ ಕಾಮಗಾರಿಗೆ ಮತ್ತು ಮುಂದಿನ ದಿನಗಳಲ್ಲಿ ಮಕ್ಕಳಿಗೆ ಅವಶ್ಯಕವಾಗಬಹುದಾದ ನೀರಿನ ಸೌಲಭ್ಯವನ್ನು ಒದಗಿಸುವಂತೆ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ತಿಳಿಸಿದರು. ಕಟ್ಟಡ ನಿರ್ಮಾಣ ಕಾಮಗಾರಿಗೆ ಜಿಲ್ಲಾಧಿಕಾರಿಗಳು ನೀಡಿರುವ ಭೂವಿಯು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಹೆಸರಿನಲ್ಲಿದ್ದು, ಕೇಂದ್ರ ಕಛೇರಿಯ ಸುತ್ತೋಲೆಯಂತೆ ಈ ಜಮೀನನ್ನು ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ ಬೆಂಗಳೂರುರವರ ಹೆಸರಿನಲ್ಲಿ ವರ್ಗಾಯಿಸುವಂತೆ ತಹಶೀಲ್ದಾರರಿಗೆ ತಿಳಿಸಿದರು. ಈ ಭೇಟಿ ಅವಧಿಯಲ್ಲಿ ಕೊಪ್ಪಳ ತಹಶೀಲ್ದಾರ ವಿಠ್ಠಲ ಚೌಗಲಾ, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಹಾಂತಸ್ವಾಮಿ ಪೂಜಾರ, ಓಜನಹಳ್ಳಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಹುಚ್ಚಪ್ಪ ಭೋವಿ, ಕೊಪ್ಪಳ ನಿರ್ಮಿತಿ ಕೇಂದ್ರದ ಸಹಾಯಕ ಅಭಿಯಂತರರು, ಓಜನಹಳ್ಳಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಶಿವಬಸಪ್ಪ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

### ಪ್ರವೇಶಕ್ಕಾಗಿ ಅರ್ಜಿ

» **ವಿಜಯನಗರ**

2024–25 ನೇ ಶೈಕ್ಷಣಿಕ ಸಾಲಿನ ಅಲ್ಪಸಂಖ್ಯಾರ ವಿದ್ಯಾರ್ಥಿಗಳಿಗೆ ಮೌಲಾನ ಆಜಾದ್ ಮಾದರಿ ಶಾಲೆಗಳಲ್ಲಿ 6 ನೇ ತರಗತಿಗೆ ಉಚಿತ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ. ಅಲ್ಪಸಂಖ್ಯಾತ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್, ಪಾರ್ಸಿ ವಿದ್ಯಾರ್ಥಿಗಳಿಗೆ ಶೇ.75 ರಷ್ಟು, ಎಸ್‌ಸಿ, ಎಸ್ಟಿ ಮತ್ತು ಹಿಂದುಳಿದ ವರ್ಗಗಳಿಗೆ ಶೇ.25 ರಷ್ಟು ಮೀಸಲಾತಿ ಆಧರಿಸಿ ಪ್ರವೇಶಕ್ಕೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಸೇವಾಸಿಂಧು ಪೋರ್ಟಲ್‌ನ https://sevasindhu.karnataka.gov.in ಮುಖಾಂತರ ಅರ್ಜಿ ಸಲ್ಲಿಸಬಹುದು ಅರ್ಜಿ ಸಲ್ಲಿಸಲು ಮೇ.10 ಕೊನೆಯ ದಿನವಾಗಿರುತ್ತದೆ. ಅರ್ಜಿ ಸಲ್ಲಿಸಲು ಅಗತ್ಯವಿರುವ ದಾಖಲೆಗಳು ಖಂಖಿಖ ಸಂಖ್ಯೆ, ಆಧಾರ್ ಸಂಖ್ಯೆ, ಚಾಲ್ತಿಯಲ್ಲಿರುವ ಮೊಬೈಲ್ ಸಂಖ್ಯೆ ಹಾಗೂ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಪಾಸ್‌ಪೋರ್ಟ್ ಸೈಜ್ ಫೋಟೊ ಮತ್ತು ಅಂಗವಿಕಲರು ಇದ್ದಲ್ಲಿ ಅಂಗವಿಕಲ ಪ್ರಮಾಣ ಪತ್ರ ದಾಖಲೆಗಳನ್ನು ಸಲ್ಲಿಸಬೇಕು. ವಿದ್ಯಾರ್ಥಿಗಳು ಉಚಿತ ಸೇವೆಯನ್ನು ಬಳಸಲು ಮೌಲಾನಾ ಆಜಾದ್ ಮಾದರಿ ಶಾಲೆಗಳು ಹಾಗೂ ಹತ್ತಿರದ ಜಿಲ್ಲಾ ಮತ್ತು ತಾಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳಿಗೆ ಭೇಟಿ ನೀಡಬಹುದು. ಹೆಚ್ಚಿನ ಮಾಹಿತಿಗಾಗಿ http://dom.karnataka.gov.in ವೆಬ್‌ಸೈಟ್‌ನ್ನು ವೀಕ್ಷಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ಯುವತಿಯರು ನಾಪತ್ತೆ

» **ವಿಜಯನಗರ**

ಹರಪನಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ 18 ವರ್ಷದ ಯುವತಿ ರಶ್ಮೀ ತಂದೆ ಲೇಟ್ ತಿಪ್ಪಾನಾಯ್ಕ ಹಾಗೂ 17 ವರ್ಷದ ಯುವತಿ ಭುವನೇಶ್ವರಿ ತಂದೆ ಹಾಲೇಶ್ ನಾಯ್ಕ ಕಾಣೆಯಾಗಿರುವ ಕುರಿತು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾಗಿರುವ ಯುವತಿಯ ಚಹರೆ : ಯುವತಿ ರಶ್ಮೀಯ ಚಹರೆ ಗೋಧಿ ಮೈಬಣ್ಣ, 5.2 ಅಡಿ ಎತ್ತರ, ದುಂಡು ಮುಖ, ಸಾಧಾರಣ ಮೈಕಟ್ಟು ಇದ್ದು, ಗೋಲ್ಡ್ ಕಲರ್ ಚೂಡಿದಾರ ಧರಿಸಿದ್ದಳು. ಕಾಣೆಯಾದ ಯುವತಿಯರ ಬಗ್ಗೆ ಮಾಹಿತಿ ಇದ್ದಲ್ಲಿ ಹರಪನಹಳ್ಳಿ ಪೊಲೀಸ್ ಉಪ ನಿರೀಕ್ಷಕರು ಮೊ.9480805776, ವಿಜಯನಗರ ಕಂಟ್ರೋಲ್ ರೂಂ ಮೊ.9480805700 ಸಂಪರ್ಕಿಸಿ

---

ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಶತಮಾನೋತ್ಸವ ಸಂಭ್ರಮ –ನಗರದ ಪ್ರಮುಖ ರಸ್ತೆಗಳಲ್ಲಿ ಆಕರ್ಷಕ ಪಥಸಂಚಲನ

# ವೈಭವದ ಹಿಂದೂರಾಷ್ಟ್ರ ಕಟ್ಟುವ ಸಂಕಲ್ಪ ಮಾಡಿ

» **ಚಳ್ಳಕೆರೆ**





20 ನಾಡಿನ ಸಮಸ್ತ ಹಿಂದೂಗಳ ರಕ್ಷಣೆಗಾಗಿ ಹಿಂದೂಸಮಾಜವನ್ನು ಹೆಚ್ಚು ಶಕ್ತಿಶಾಲಿಯನ್ನಾಗಿ ಮಾಡುವ ನಿಟ್ಟಿನಲ್ಲಿ ಪ್ರತಿಯೊಬ್ಬ ಹಿಂದೂವೂ ಆತ್ಮವಿಶ್ವಾಸದಿಂದ ಬದುಕನ್ನು ಕಂಡುಕೊಳ್ಳುವ ನಿಟ್ಟಿನಲ್ಲಿ ರಾಷ್ಟ್ರೀಯ ಸ್ವಯಂಸೇವಕ ಸಂಘವನ್ನು ಆರಂಭಿಸಲಾಯಿತು. ಆರ್‌ಎಸ್‌ಎಸ್ ಆರಂಭವಾಗಿ ನೂರನೇ ವರ್ಷಕ್ಕೆ ಕಾಲಿಡುತ್ತಿರುವ ಶತಮಾನೋತ್ಸವದ ಸವಿನೆನಪಿಗಾಗಿ ಸ್ವಯಂಸೇವಕ ಪಥಸಂಚಲನವನ್ನು ಹಮ್ಮಿಕೊಳ್ಳಲಾಗಿದೆ. ರಾಷ್ಟ್ರದ ವೈಭವವನ್ನು ಎತ್ತಿಹಿಡಿಯುವ ಕಾರ್ಯದ ಸಂಕಲ್ಪವನ್ನು ನಾವೆಲ್ಲರೂ ಮಾಡಬೇಕೆಂದು ಕರ್ನಾಟಕ ದಕ್ಷಿಣ ಪ್ರಾಂತ ಬೌದ್ಧಿಪ್ರಮುಖ್ ಜಿ.ಕೃಷ್ಣಪ್ರಸಾದ್ ತಿಳಿಸಿದರು.

ಅವರು, ಭಾನುವಾರ ನಗರದ ಬಿಎಂ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ ರಾಷ್ಟ್ರೀಯ ಸ್ವಯಂಸೇವಕ ಸಂಘ ಪಥಸಂಚಲನಕ್ಕೂ ಮುನ್ನ ಸ್ವಯಂಸೇವಕರಿಗೆ ಸಂಘದ ಕಾರ್ಯಚಟುವಟಿಕೆಗಳನ್ನು ವಿವರಿಸಿದರು. ಕಾಂಗ್ರೆಸ್ ಪಕ್ಷದ ಅಗ್ರಗಣ್ಯ ನಾಯಕರಾದ ಮಹಾತ್ಮಗಾಂಧೀಜಿ, ಬಾಲಗಂಗಾಧರ ತಿಲಕರವರ ಮಾರ್ಗದರ್ಶನದಲ್ಲಿ ಕಾಂಗ್ರೆಸ್ ಪಕ್ಷದ ಸಂಘಟನೆಯಲ್ಲಿದ್ದ ಕೇಶವಬಲರಾಮ್ ಹೆಡೆಗೆವಾರ್(ಗುರುಜಿ) ಹಿಂದೂರಾಷ್ಟ್ರದ ಕಲ್ಪನೆಗೆಜೀವತುಂಬುವನಿಟ್ಟಿನಲ್ಲಿರಾಷ್ಟ್ರೀಯ ಸ್ವಯಂಸೇವಕ ಸಂಘವನ್ನು ಸ್ಥಾಪನೆ ಮಾಡಿದರು. ಸತತ ನೂರು ವರ್ಷಗಳ ಕಾಲ ರಾಷ್ಟ್ರೀಯ ಸ್ವಯಂಸೇವಕ ಸಂಘ ದೇಶಕ್ಕೆ ಅಪಾಯಬಂದೊದಗಿದ ಸ್ಥಿತಿಯಲ್ಲಿ ಚಂಡಮಾರುತಮುಂತಾದಪ್ರಕೃತಿವಿಕೋಪ ಸಂದರ್ಭದಲ್ಲಿ ಸಿಲುಕಿದ ಬಡಜನರ ಸಹಾಯಕ್ಕಾಗಿ ಕಾರ್ಯನಿರ್ವಹಿಸಿದೆ, ವಿಶೇಷವೆಂದರೆ ಜವಹರಲಾಲ್‌ನೆಹರೂ ಪ್ರಧಾನಿಯಾಗಿದ್ದಾಗ ದೇಶದಲ್ಲಿ ಸಂಭವಿಸಿದ ಪ್ರಮುಖ ಘಟನೆಯೊಂದರಲ್ಲಿ ಜನರ ರಕ್ಷಣೆಗಾಗಿ ನಿಂತಿದ್ದು ರಾಷ್ಟ್ರೀಯ ಸ್ವಯಂಸೇವಕ ಸಂಘದವರು. ರಾಷ್ಟ್ರೀಯ ಸ್ವಯಂಸೇವಕ ಸಂಘದವರು ಕೇವಲ ನಮ್ಮ ರಾಷ್ಟ್ರದ ಸ್ವಯಂಸೇವಕರು, ಸಾರ್ವಜನಿಕರಲ್ಲದೆ, ಪಾಶ್ಚತ್ಯದೇಶಗಳಲ್ಲೂ ಸಹ ಸಂಘದ ಕಾರ್ಯಚಟುವಟಿಕೆಯ ಬಗ್ಗೆ ಪ್ರಶಂಸೆ ವ್ಯಕ್ತವಾಗುತ್ತಿದೆ. ರಾಷ್ಟ್ರೀಯ ಸ್ವಯಂಸೇವಕ ಸಂಘ ತನ್ನದೇಯಾದ ಗಟ್ಟಿನಿಲುವಿನಿಂದ ಜನರ ಮನಸನ್ನು ಪರಿವರ್ತನೆ ಮಾಡುವುದರಲ್ಲಿ ಯಶಸ್ವಿಯಾಗಿದೆ.

ಬ್ರಟೀಷರೂ ಸೇರಿದಂತೆ ಅನೇಕ ಪಾಶ್ಚಿಮಾತ್ಯರು ನಮ್ಮ ರಾಷ್ಟ್ರವನ್ನು ಆಳಿ ನಮ್ಮ ಮೂಲ ಸಂಸ್ಕೃತಿ ಮತ್ತು ಘನತೆಗೆ ದಕ್ಕೆತಂದಿರುತ್ತಾರೆ. ಆದರೆ, ರಾಜಕೀಯ ವಲಯದಲ್ಲಿ ಸಮಾಜವನ್ನು ಪರಿವರ್ತನೆ ಮಾಡುವ ಕೆಲಸ ನಿರೀಕ್ಷಿತ ಮಟ್ಟದಲ್ಲಿ ಸಾಧ್ಯವಾಗಿಲ್ಲ. ಆದ್ದರಿಂದ ರಾಷ್ಟ್ರೀಯ ಸ್ವಯಂಸೇವಕ ಸಂಘ ಇಂದು ಕೇವಲ ನಗರ ಪ್ರದೇಶವಲ್ಲದೆ, ಗ್ರಾಮಾಂತರ ಪ್ರದೇಶದಲ್ಲಿಯೂ ಸಹ ತನ್ನ ಕಾರ್ಯಚಟುವಟಿಕೆಯನ್ನು ವಿಸ್ತರಣೆ ಮಾಡುವ ಮೂಲಕ ಜನರಿಗೆ ಹತ್ತಿರವಾಗುತ್ತಿದೆ. ಪ್ರತಿಯೊಂದು ನಗರ, ಪಟ್ಟಣ ಹಾಗೂ ಗ್ರಾಮಾಂತರ ಪ್ರದೇಶಗಳಲ್ಲಿ ಸಂಘದ ಶಾಖೆಯನ್ನು ಆರಂಭಿಸಬೇಕಿದೆ. ಪ್ರತಿದಿನ ಶಾಖೆಯಲ್ಲಿ ರಾಷ್ಟ್ರೀಯ ಭಾವನೆಗಳಿಗೆ ಜೀವತುಂಬುವ, ಭಾವನೆಗಳನ್ನು ಗೌರವಿಸುವ ಕೆಲಸವನ್ನು ಸಂಘ ಮಾಡುತ್ತಾ ಬಂದಿದೆ. ಅನೇಕ ವರ್ಷಗಳ ಹಿರಿಯರ ಹಾರೈಕೆಯ ವರದಿಂದ ಇಂದು ನಾವು ಪ್ರಬಲವಾದ ಹಿಂದುತ್ವವನ್ನು ಹೊಂದಿದ್ದೇವೆ, ಹಿಂದುತ್ವದ ವಿಚಾರಧಾರೆಗಳ ಬಗ್ಗೆ ಜನರಲ್ಲೂ ಜಾಗೃತಿ ಮೂಡಿಸುವಲ್ಲಿ ಸಂಘ ಯಶಸ್ವಿಯಾಗಿದೆ. ಇಂದು ಸಮಾಜದ ಎಲ್ಲಾ ವರ್ಗಕ್ಕೂ ಸಂಘದ ಕಾರ್ಯಚಟುವಟಿಕೆ ತೃಪ್ತಿತಂದಿದೆ. ಸಂಘವನ್ನು ದ್ವೇಷಮಾಡುವ ಅನೇಕ ಶಕ್ತಿಗಳು ಇಂದು ಸಂಘವನ್ನು ಹೃತ್ಪೂರ್ವಕವಾಗಿ ಸ್ವಾಗತಿಸುತ್ತಿವೆ. ದೇಶದ ಯಾವುದೇ ಮೂಲೆಗಳಲ್ಲಿ ಸಂಘದ ಕಾರ್ಯಚಟುವಟಿಕೆ ನಡೆದರೂ ಅದನ್ನು ಗೌರವಿಸುವವರ ಪ್ರವೃತ್ತಿ ಹೆಚ್ಚುತ್ತಿದೆ. ಶಿಸ್ತು, ಸಂಸ್ಕಾರ, ಸಮಾನತೆ, ಮುಂತಾದ ಸದ್ವಿಚಾರಗಳನ್ನು ನಾವು ಸಂಘದ ಶಾಖೆಯಲ್ಲಿ ಅರಿಯಬಹುದಾಗಿದೆ. ಪ್ರತಿಯೊಂದು ಮನೆ, ಪ್ರತಿಯೊಬ್ಬರ ಮನಸು ಹಿಂದುತ್ವದ ನಿಲುವನ್ನು ಒಪ್ಪಿಕೊಂಡು ಮುನ್ನಡೆದರೆ ಮಾತ್ರ ವೈಭವದ ರಾಷ್ಟ್ರವನ್ನು ನಾವು ಕಾಣಬಹುದಾಗಿದೆ ಎಂದರು.

ಕಾರ್ಯಕ್ರಮದ ನಂತರ ಬಿಎಂ ಸರ್ಕಾರಿ ಪ್ರೌಢಶಾಲಾ ಮೈದಾನದಿಂದ ಹೊರಟ ಪಥಸಂಚಲನ ಹಳೇನಗರಸಭೆ ರಸ್ತೆ, ಪ್ರಧಾನಅಂಚೆಕಚೇರಿ, ಜ್ಞಾನಧಾರಶಾಲೆ, ಅಂಬೇಡ್ಕರ್ ವೃತ್ತ, ನೆಹರೂ ವೃತ್ತ, ಬಳ್ಳಾರಿ ರಸ್ತೆ, ಹಳೇಟೌನ್, ಕಿತ್ತೂರುರಾಣಿಚನ್ನಮ್ಮರಸ್ತೆ, ಪಾವಗಡ ರಸ್ತೆ, ನೆಹರೂವೃತ್ತದಮೂಲಕಬಿಎಂಪ್ರೌಢಶಾಲಾ ಮೈದಾನಕ್ಕೆ ಆಗಮಿಸಿತು. ದಾರಿಯುದ್ದಕ್ಕೂ ಸಾರ್ವಜನಿಕರು ಭಗವಾದ್ವಜಕ್ಕೆ ಭಕ್ತಿ, ಶ್ರದ್ದೆಯಿಂದ ಪುಷ್ಪನಮನ ಸಲ್ಲಿಸಿದರು. ನಗರ ಕಾರ್ಯವಾಹ ಚಂದ್ರಶೇಖರ್ ಸೇರಿದಂತೆ ನೂರಾರು ಸ್ವಯಂ ಸೇವಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಬಹಳ ವರ್ಷಗಳ ನಂತರ ನಗರದಲ್ಲಿ ನಡೆದ ಆರ್‌ಎಸ್‌ಎಸ್ ಪಥಸಂಚಲನ ಸಾರ್ವಜನಿಕರಲ್ಲಿ ಹೊಸ ಸಂಚಲನವನ್ನೇ ಉಂಟು ಮಾಡಿತು.

---

# ಎಲ್ಲರ ಬಗ್ಗೆ ಯೋಚಿಸಿದ ಗಾಂಧೀಜಿ: ಡಾ.ಆನಂದ್

» **ಚಿತ್ರದುರ್ಗ**



ಬಹಳ ಜನರು ತಮ್ಮ ಬದುಕನ್ನು ಮಾತ್ರ ಕುರಿತು ಆಲೋಚಿಸುತ್ತಸ್ವಾರ್ಥಿಗಳೆನಿಸಿಕೊಳ್ಳುತ್ತಾರೆ.ಆದರೆ ಗಾಂಧೀಜಿಯಂಥ ವಿಶಾಲ ಹೃದಯದವರು ಎಲ್ಲರನ್ನು ಕುರಿತು ಚಿಂತಿಸುತ್ತಾರೆ ಎಂದು ಪ್ರಾಧ್ಯಾಪಕ ಡಾ.ಎಸ್.ಆನಂದ್ ಹೇಳಿದರು.

ನಗರದ ಚಂದ್ರವಳ್ಳಿಯ ಎಸ್.ಜೆ.ಎಂ. ಕಲಾ, ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಘಟಕ–1 ಮತ್ತು ಘಟಕ–2ರ ಸಹಯೋಗದಲ್ಲಿ ನಡೆದ ಗಾಂಧಿ ಭಾರತ; ನಾವು ಮನುಜರು ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು.

ಏನು ಇಲ್ಲದವರು ಎಲ್ಲ ಇದ್ದಂತೆ ತೋರ್ಪಡಿಸುವ ಈ ಕಾಲದಲ್ಲಿ ಏನು ಇಲ್ಲದಂತೆ ಬದುಕಿ, ಮಹಾತ್ಯಾಗಿ ಏನಿಸಿಕೊಂಡವರು ಗಾಂಧೀಜಿ. ಗಾಂಧೀಜಿಯವರ ಇಡೀ ಬದುಕು ಸ್ಪಂದನಶೀಲವಾಗಿತ್ತು ಎಂದರು.

ಮನುಷ್ಯರಾದವರು ನಿಜ ಮನುಷ್ಯರಾಗಿ, ಸಹವರ್ತಿಯಾಗಿ, ಸಹಜೀವನ ನಡೆಸುವಂತಾಗಬೇಕು. ಒಮ್ಮೆ ಬುದ್ಧ ತನ್ನ ಬಳಿ ದೀಕ್ಷೆ ಬಯಸಿ ಬಂದ ಶಿಷ್ಯನಿಗೆ ನೇಪಾಳದಲ್ಲಿ ಬುದ್ಧನ ವಿಗ್ರಹಗಳು ನಾನಾರೂಪದಲ್ಲಿವೆ ನೋಡಿಕೊಂಡು ಬಾ ಎಂದು ಕಳಿಸುತ್ತಾನೆ. ಆ ಶಿಷ್ಯನು ಅವುಗಳನ್ನು ನೋಡಿ ಮನಸೋತು, ನೀವು ನನಗೆ ಗುರುಗಳಾಗಬೇಕೆಂದು ಕೇಳಿಕೊಳ್ಳುತ್ತಾನೆ. ನಂತರ ಒಳ್ಳೆಯ ಗುಣಗಳನ್ನು ಅಳವಡಿಸಿಕೊಂಡು ಬುದ್ಧನಿಂದ ದೀಕ್ಷೆಯನ್ನು ಪಡೆದು ಮಹಾಭಿಕ್ಕುವಾಗುತ್ತಾನೆ.

ಹಾಗೆ ಒಳ್ಳೆಯ ವಿಚಾರಧಾರೆಗಳನ್ನು ಮೈಗೂಡಿಸಿಕೊಂಡ ಫಲವಾಗಿ ಗಾಂಧೀಜಿಯವರು ಮಹಾತ್ಮರೆಂದು ಪ್ರಸಿದ್ಧಿ ಪಡೆಯುತ್ತಾರೆ ಎಂದು ತಿಳಿಸಿದರು.

ಇಂತಹ ಬುದ್ಧ ಮತ್ತು ಗಾಂಧೀಜಿಯವರ ವಿಚಾರಗಳನ್ನು ನಾವೆಲ್ಲ ಮೈಗೂಡಿಸಿಕೊಳ್ಳಬೇಕು. ಪ್ರತಿಯೊಬ್ಬರು ಸತ್ಪುರುಷರ ಆದರ್ಶಗಳನ್ನು ಅಳವಡಿಸಿಕೊಂಡಾಗ ಮಾತ್ರ ಸಮರ್ಥ ರಾಷ್ಟ್ರ ನಿರ್ಮಾಣವಾಗಲು ಸಾಧ್ಯ ಎಂದರು.

# ಸಾಮಾಜಿಕ ಸಮೀಕ್ಷೆ ಮೂಲಪ್ರತಿ ನನ್ನ ಬಳಿ ಇರಲು ಹೇಗೆ ಸಾಧ್ಯ: ಅಶೋಕ್ ಆರೋಪಕ್ಕೆ ಸಿಎಂ ತಿರುಗೇಟು

» **ಬೆಳಗಾವಿ**



ಮುಸಲ್ಮಾನರಿಗೆ, ಹಿಂದುಳಿದವರಿಗೆ ಮಾತ್ರವಲ್ಲದೆ , ಎಲ್ಲಾ ಧರ್ಮದ, ಎಲ್ಲಾ ಜಾತಿಯ ಬಡವರಿಗೆ ಶಿಕ್ಷಣ ಸಿಗಬೇಕು , ಸಾಮಾಜಿಕ ಆರ್ಥಿಕ ಶಕ್ತಿ ತುಂಬಬೇಕು. ಇದೇ ನಮ್ಮ ಗುರಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನುಡಿದರು. ಅವರು ಇಂದು ಬೆಳಗಾವಿ ಸಾಂಭ್ರಾ ವಿಮಾನ ನಿಲ್ದಾಣದಲ್ಲಿ ಮಾಧ್ಯಮದವರ ಜೊತೆ ಮಾತನಾಡಿದರು.ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆಯ ಮೂಲ ಪ್ರತಿ ಮುಖ್ಯಮಂತ್ರಿಗಳ ಬಳಿಯಿದೆ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು ಮಾಡಿರುವ ಆರೋಪಕ್ಕೆ ಪ್ರತಿಕ್ರಿಯೆ ನೀಡಿ ಆಶೋಕ್ ಅವರು ಯಾವತ್ತಾದರೂ ಸತ್ಯವನ್ನು ಹೇಳಿದ್ದಾರೆಯೇ? ಅವರು ಸುಳ್ಳೇ ಹೇಳುವುದು. ಮೂಲ ಪ್ರತಿ ನನ್ನ ಬಳಿಯಿರಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದ ಮುಖ್ಯಮಂತ್ರಿಗಳು ರಾಹುಲ್ ಗಾಂಧಿಯವರಿಗೆ ನಾವು ಪತ್ರ ಬರೆದಿಲ್ಲ ಆದರೆ ಅವರೊಂದಿಗೆ ಚರ್ಚೆ ಮಾಡಿ ಸಚಿವ ಸಂಪುಟ ಸಭೆಯಲ್ಲಿ ಸಮೀಕ್ಷೆ ವರದಿಯನ್ನು ಮಂಡಿಸಿದ್ದೇವೆ ಎಂದರು.

---

**ಪ್ರಮುಖ ಸುದ್ದಿ**

# ದಾಖಲೆ ರಹಿತ ಜನವಸತಿ ಪ್ರದೇಶ ನಿವಾಸಿಗಳಿಗೆ ಹಕ್ಕುಪತ್ರ: ಶಾಸಕ ಕೆ.ಎಸ್.ಬಸವಂತಪ್ಪ

» **ದಾವಣಗೆರೆ**



ದಾಖಲೆ ರಹಿತ ಜನವಸತಿ ಪ್ರದೇಶಗಳಾದ ತಾಂಡ, ಹಟ್ಟಿ, ಹಾಡಿ, ದೊಡ್ಡಿ, ಪಾಳ್ಯ, ಮಜರೆ, ಕ್ಯಾಂಪ್, ಕಾಲೋನಿ ಇತ್ಯಾದಿಗಳನ್ನು ಗುರುತಿಸಿ ಹೊಸ ಕಂದಾಯ ಗ್ರಾಮ ಹಾಗೂ ಉಪಗ್ರಾಮಗಳೆಂದು ಘೋಷಿಸಿದು, ಅಲ್ಲಿನ ನಿವಾಸಿಗಳಿಗೆ ಶೀಘ್ರವೇ ಹಕ್ಕುಪತ್ರ ವಿತರಿಸಲು ಸರ್ಕಾರ ಕ್ರಮ ತೆಗೆದುಕೊಂಡಿದೆ ಎಂದು ಶಾಸಕ ಕೆ.ಎಸ್.ಬಸವಂತಪ್ಪ ತಿಳಿಸಿದರು.

ಮಾಯಕೊಂಡ ಕ್ಷೇತ್ರದ ಕತ್ತಲಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕವಳಿತಾಂಡ ಗ್ರಾಮದಲ್ಲಿ 2019–20ನೇ ಸಾಲಿನ ಪ್ರಧಾನಮಂತ್ರಿ ಆದರ್ಶ ಗ್ರಾಮ ಯೋಜನೆಯಡಿ ನೂತನವಾಗಿ ನಿರ್ಮಾಣ ಮಾಡಿರುವ 12 ಲಕ್ಷ ರೂ. ವೆಚ್ಚದ ಶುದ್ಧ ಕುಡಿಯುವ ನೀರಿನ ಘಟಕ ಉದ್ಘಾಟಿಸಿ ಅವರು ಮಾತನಾಡಿದರು.

ದಾಖಲೆ ರಹಿತ ಜನವಸತಿ ಪ್ರದೇಶದಲ್ಲಿ ವಾಸಿಸುವ ಜನರು ಸರ್ಕಾರದ ಯಾವುದೇ ಸೌಲಭ್ಯಗಳು ಇಲ್ಲದೆ ನಿಕೃಷ್ಟ ಜೀವನ ಮಾಡುತ್ತಿದ್ದಾರೆ. ಈ ನಿಟ್ಟಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ದಾಖಲೆ ರಹಿತ ಜನವಸತಿ ಪ್ರದೇಶಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾಡಲು ಈಗಾಗಲೇ ಘೋಷಣೆ ಮಾಡಿದ್ದಾರೆ. ಇನ್ನು 15 ರಿಂದ 20 ದಿವಸದೊಳಗೆ ರಾಜ್ಯ ಮಟ್ಟದಲ್ಲಿ ಹಕ್ಕುಪತ್ರ ವಿತರಣೆ ಮಾಡಿ ಉಳಿದ ಎಲ್ಲಾ ದಾಖಲೆ ರಹಿತ ಜನವಸತಿ ಪ್ರದೇಶಗಳಲ್ಲಿ ವಾಸಿಸುವ ನಿವಾಸಿಗಳಿಗೆ ಹಕ್ಕುಪತ್ರ ನೀಡಲಿದ್ದಾರೆ ಎಂದು ಭರವಸೆ ನೀಡಿದರು.

ದಾಖಲೆ ರಹಿತ ಜನವಸತಿ ಪ್ರದೇಶಗಳಲ್ಲಿ ವಾಸಿಸುವ ನಿವಾಸಿಗಳಿಗೆ ಹಕ್ಕುಪತ್ರ ಇಲ್ಲದೆ ಇ–ಸ್ವತ್ತು, ಸರ್ಕಾರದ ಸೌಲಭ್ಯಗಳನ್ನು ಪಡೆದುಕೊಳ್ಳಲು ಸಮಸ್ಯೆ ಆಗುತ್ತಿದೆ. ಈ ಸಮಸ್ಯೆಗೆ ಮುಕ್ತಿ ನೀಡಲು ಸರ್ಕಾರ ಕಂದಾಯ ಗ್ರಾಮಗಳನ್ನಾಗಿಸಲು ಕ್ರಮ ತೆಗೆದುಕೊಂಡಿದ್ದು, ಹಕ್ಕುಪತ್ರ ದೊರೆತ ಬಳಿಕ ಇ–ಸ್ವತ್ತು, ಸರ್ಕಾರದ ಸೌಲಭ್ಯ ಪಡೆಯಲು ಅನುಕೂಲವಾಗಲಿದೆ ಎಂದರು.

ಸರ್ಕಾರ ಕಂದಾಯ ಗ್ರಾಮ ಘೋಷಿಸಿದ್ದರೂ ನಮಗೆ ಹಕ್ಕುಪತ್ರ ನೀಡಿಲ್ಲ ಎಂದು ಕವಳಿತಾಂಡ ನಿವಾಸಿಗಳು ಶಾಸಕರನ್ನು ಪ್ರಶ್ನಿಸಿದರು. ಕೂಡಲೇ ತಹಸೀಲ್ದಾರ್ ಅವರಿಗೆ ದೂರವಾಣಿ ಮೂಲಕ ಸಂಪರ್ಕಿಸಿ, ಸರ್ಕಾರ ಕಂದಾಯ ಘೋಷಿಸಿದ್ದು, ಈ ಭಾಗದ ಜನರಿಗೆ ಹಕ್ಕುಪತ್ರ ಏಕೆ ಕೊಟ್ಟಿಲ್ಲ ಎಂದು ಪ್ರಶ್ನಿಸಿದರು. ಹಕ್ಕುಪತ್ರ ಕೊಡಲು ಎಲ್ಲಾ ಸಿದ್ಧತೆ ಮಾಡಿಕೊಂಡಿದ್ದೇವೆ. ರಾಜ್ಯ ಮಟ್ಟದಲ್ಲಿ ಕಾರ್ಯಕ್ರಮ ಮುಗಿದ ಕೂಡಲೇ ವಿತರಿಸುತ್ತೇವೆ ಎಂದು ಮಾಹಿತಿ ನೀಡಿದರು. ದೂರವಾಣಿ ಸಂಭಾಷಣೆಯಲ್ಲಿ ಮೈಕ್ ಮೊಬೈಲ್ ಬಳಿ ಹಿಡಿದು ಜನರಿಗೆ ಸ್ಪಷ್ಟಪಡಿಸಿದರು.

ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸುವುದು ಮುಖ್ಯವಲ್ಲ. ಅವುಗಳ ನಿರ್ವಹಣೆ ಬಹಳ ಮುಖ್ಯ. ಧರ್ಮಸ್ಥಳ ಸಂಘದವರು ನಿರ್ವಹಣೆ ಮಾಡಿದಂತೆ ಗ್ರಾಮ ಪಂಚಾಯಿತಿ ಕೂಡ ಅದೇ ರೀತಿಯಾಗಿ ನಿರ್ವಹಣೆ ಮಾಡಬೇಕು. ಕ್ಷೇತ್ರದ ವ್ಯಾಪ್ತಿಯ ಕೆಲವೆಡೆ ಗುತ್ತಿಗೆದಾರರ ನಿರ್ವಹಣೆ ಇಲ್ಲದೇ ನೀರು ಶುದ್ಧೀಕರಿಸದೆ ನೇರವಾಗಿ ಬರುತ್ತಿವೆ. ಈ ರೀತಿ ಆಗಬಾರದು. ಘಟಕವನ್ನು ಸರಿಯಾಗಿ ನಿರ್ವಹಣೆ ಮಾಡುವ ಮೂಲಕ ಜನರಿಗೆ ಶುದ್ಧ ನೀರು ಪೂರಸಬೇಕೆಂದು ಗ್ರಾಪಂ ಅಧಿಕಾರಿಗಳಿಗೆ ತಾಕೀತು ಮಾಡಿದರು.

ಈ ಸಂದರ್ಭದಲ್ಲಿ ಬಸವಾಪಟ್ಟಣ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ.ಜಿ.ನಾಗಣ್ಣ, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಡಿ.ತಿಪ್ಪಣ್ಣ, ರೈತ ಮುಖಂಡರಾದ ತೇಜಸ್ವಿ ಪಟೇಲ್, ಗ್ರಾಮ ಪಂಚಾಯಿತಿ ಅಧ್ಯಕ್ಷ ಮಂಜಣ್ಣ, ಗ್ರಾಪಂ ಪಿಡಿಒ ಯಶೋಧಮ್ಮ, ಗ್ರಾಮದ ಮುಖಂಡರಾದ ಶಶಿಕುಮಾರ್ ಲೋಕೇಶ್ ನಾಯ್ಕ್, ಹನುಮಂತ ನಾಯ್ಕ್ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.



# ಅಂಬೇಡ್ಕರ್ ಗಾಂಧಿ

## ಶತ್ರುಗಳೇ–ಮಿತ್ರರೇ....

### ಉದಾಹರಣೆ ಮತ್ತು ಎಚ್ಚರಿಕೆ......



ಭಾರತೀಯ ಸಮಾಜದಲ್ಲಿ ಅಸ್ಪೃಶ್ಯತೆ, ಜಾತಿ ಪದ್ಧತಿಯ ನಿರ್ಮೂಲನೆಯಾಗಿ ಸಮ ಸಮಾಜ ನಿರ್ಮಾಣವಾಗಬೇಕೆಂಬುದು ಎಷ್ಟು ಮುಖ್ಯವೋ, ಸುಮಾರು ನೂರು ವರ್ಷಗಳ ಹಿಂದೆ ಭಾರತದ ಸ್ವಾತಂತ್ರ್ಯ ಗಳಿಸುವುದು ಸಹ ಅಷ್ಟೇ ಮುಖ್ಯವಾಗಿತ್ತು ಎಂದು ಭಾವಿಸುವವರಿಗೆ ಅಂಬೇಡ್ಕರ್ ಮತ್ತು ಗಾಂಧಿ ಇಬ್ಬರು ಮಹತ್ವದ ವ್ಯಕ್ತಿಗಳಾಗಿ ಕಾಣುತ್ತಾರೆ...

ಹಾಗೆಯೇ ಸಂವಿಧಾನಾತ್ಮಕ ಪ್ರಜಾಪ್ರಭುತ್ವವನ್ನು ಉಳಿಸುವ ಮತ್ತು ನೈತಿಕ ಮೌಲ್ಯಗಳನ್ನು ಬೆಳೆಸುವ ಮನಸ್ಸಿರುವವರಿಗೆ ಗಾಂಧಿ ಮತ್ತು ಅಂಬೇಡ್ಕರ್ ಆದರ್ಶಗಳಾಗಿಯೇ ಕಾಣುತ್ತಾರೆ.......

ವೈಯಕ್ತಿಕಸ್ವಾರ್ಥದ,ದ್ವೇಷಭಾವನೆಯ,ಇತಿಹಾಸದ ಸಂಘರ್ಷವನ್ನು ಈಗಲೂ ಜೀವಂತವಿಡುವ ಮನೋಭಾವದ ಕೆಲವರಿಗೆ ಅಂಬೇಡ್ಕರ್ – ಗಾಂಧಿ ಅಜನ್ಮ ಶತ್ರುಗಳ ರೀತಿಯೇ ಕಾಣುತ್ತಾರೆ......

ವರ್ಣಾಶ್ರಮ ವ್ಯವಸ್ಥೆಯ ಆಚರಣೆ ಆಳವಾಗಿ ಬೇರೂರಿದ್ದ 1869 ರಲ್ಲಿ ಗುಜರಾತಿನ ಅತ್ಯಂತ ಮೇಲ್ವರ್ಗದ ಬನಿಯಾ ಜಾತಿಯಲ್ಲಿ ಗಾಂಧಿ ಹುಟ್ಟಿದರೆ, ಮುಟ್ಟಿಸಿಕೊಳ್ಳದ ಊರ ಹೊರಗಿನ ಅಸ್ಪೃಶ್ಯ ಮಹರ್ ಜಾತಿಯಲ್ಲಿ 1891 ರಲ್ಲಿ ಅಂಬೇಡ್ಕರ್ ಜನಿಸುತ್ತಾರೆ. ಈಗ ಯೋಚಿಸಿ ನೋಡಿ ಯಾರ ಮನಸ್ಥಿತಿ, ಯಾರ ಪರಿಸ್ಥಿತಿ, ಯಾರ ಆಧ್ಯತೆ ಏನೇನಾಗಿರಬಹುದು ಎಂದು....

ಸಹಜವಾಗಿಯೇ ಗಾಂಧಿಗೆ ಭಾರತದ ಸ್ವಾತಂತ್ರ್ಯ ವಿಮೋಚನೆ ಬಹಳ ಮುಖ್ಯವಾದರೆ, ಅಂಬೇಡ್ಕರ್ ಅವರಿಗೆ ದಲಿತ ವಿಮೋಚನೆ ಅತ್ಯಂತ ಪ್ರಮುಖವಾಗುತ್ತದೆ. ಅದೃಷ್ಟವೋ, ದುರಾದೃಷ್ಟವೋ ಆ ಕಾಲಘಟ್ಟದಲ್ಲಿ ಇಬ್ಬರು ದೇಶದ – ವಿಶ್ವದ ಮಹೋನ್ನತ ಚಿಂತಕರು – ಹೋರಾಟಗಾರರು ಪರಸ್ಪರ ಮುಖಾಮುಖಿಯಾಬೇಕಾಗುತ್ತದೆ. ಆಗ ಸಹಜವಾಗಿ ವಿಚಾರ ಸಂಘರ್ಷವು ಏರ್ಪಡುತ್ತದೆ. ಅದನ್ನು ವಿಮರ್ಶಿಸುವ, ಅರಿಯುವ, ಅಳವಡಿಸಿಕೊಳ್ಳುವ, ತಿರಸ್ಕರಿಸುವ, ವಿರೋಧಿಸುವ ಎಲ್ಲಾ ಸಾಧ್ಯತೆಗಳ ಅದೃಷ್ಟಶಾಲಿಗಳು ನಾವಾಗಿದ್ದೇವೆ. ಆದರೆ ಕೆಲವೇ ಕೆಲವು ಜನರು ಮಾತ್ರ ಅತಿರೇಕದ ವಿಚಾರಗಳಿಗೆ ಮರುಳಾಗಿ ಒಬ್ಬರಿಗೊಬ್ಬರು ದ್ವೇಷಿಸುವ ವಾತಾವರಣಕ್ಕೆ ನೀರೆರೆಯುತ್ತಿದ್ದಾರೆ......

ಹೌದು,ಗಾಂಧಿಯವರನ್ನುದಲಿತಸಮುದಾಯಗಳು ವಿರೋಧಿಸಲು ಸಾಕಷ್ಟು ಕಾರಣಗಳು ಸಿಗುತ್ತವೆ ಎಂಬುದು ನಿಜ. ಗಾಂಧಿ ಪ್ರಾರಂಭದ ಹಂತದಲ್ಲಿ ಸನಾತನ ಧರ್ಮದ ಮೂಲ ಬೇರಾದ ವರ್ಣಾಶ್ರಮ ವ್ಯವಸ್ಥೆಯನ್ನು ಒಪ್ಪಿಕೊಂಡಿದ್ದರು. ಅದರ ಆಚರಣೆಯನ್ನು ಪ್ರತಿಪಾದಿಸುತ್ತಿದ್ದರು. ಆದರೆ ಅಂಬೇಡ್ಕರ್ ಅವರ ಅಧ್ಯಯನ, ಹೋರಾಟ ಮತ್ತು ಭಾರತದ ಸಾಮಾಜಿಕ ಮತ್ತು ರಾಜಕೀಯ ಹೋರಾಟದ ಫಲವಾಗಿ ಗಾಂಧಿಯವರಿಗೆ ಜಾತಿ ಪದ್ಧತಿಯ ಕರಾಳ ಮುಖದ ಪರಿಚಯವಾಗುತ್ತದೆ. ಆಗ ಅವರು ಪರಿವರ್ತನೆ ಹೊಂದಿ ಊರ ಹೊರಗೆ ಮುಟ್ಟಿಸಿಕೊಳ್ಳದ ಸಮುದಾಯಗಳ ಬಗ್ಗೆ ಸಾಕಷ್ಟು ಕಾಳಜಿ ವಹಿಸುತ್ತಾರೆ. ಅಂಬೇಡ್ಕರ್ ಅವರಷ್ಟು ಆಳವಾಗಿ ಮತ್ತು ಮನಃಪೂರ್ವಕವಾಗಿ ಅಲ್ಲದಿದ್ದರು ಕನಿಷ್ಠ ಪ್ರಜ್ಞಾಪೂರ್ವಕವಾಗಿ ಆ ಬಗ್ಗೆ ಮಾತನಾಡುತ್ತಾರೆ ಮತ್ತು ಸುಧಾರಣೆಗೆ ಪ್ರಯತ್ನಿಸುತ್ತಾರೆ. ಅದನ್ನು ಗಮನಿಸಬೇಕು.... ..

ಅಸ್ಪೃಶ್ಯ ಸಮುದಾಯಗಳನ್ನು ಕನಿಷ್ಠ ಸ್ಪೃಶ್ಯ ಮಾಡುವ ಆಲೋಚನೆಯಿಂದ ಅವರನ್ನು ಹರಿಜನ ಅಂದರೆ ದೇವರ ಮಕ್ಕಳು ಎಂದು ಕರೆದು ಜನರಲ್ಲಿರು ದೇವರ ಬಗೆಗಿನ ಭಕ್ತಿಯನ್ನು ಉಪಯೋಗಿಸಿಕೊಂಡು ಅವರನ್ನು ಸಮಾಜದ ಸಹ್ಯ ಸಮುದಾಯವಾಗಿ ಮಾಡಲು ಒಂದು ಹಂತದಲ್ಲಿ ಸಣ್ಣದಾಗಿ ಪ್ರಯತ್ನಿಸುತ್ತಾರೆ......

ಅತ್ಯಂತ ಪ್ರಮುಖವಾಗಿ ಕೆಲವು ವೈಚಾರಿಕ ಉಗ್ರ ದಲಿತ ನಾಯಕರು ಮತ್ತು ಚಿಂತಕರಿಗೆ ಗಾಂಧಿಯವರ ಬಗ್ಗೆ ಈಗಲೂ ದ್ವೇಷ ಈ ಮಟ್ಟದಲ್ಲಿ ಉಳಿಯಲು ಕಾರಣ "ಪೂನ ಒಪ್ಪಂದಕ್ಕೆ "ಗಾಂಧಿಯವರು ತೋರಿದ ಅತ್ಯುಗ್ರ ಉಪವಾಸದ ವಿರೋಧ ಮತ್ತು ಅದರಲ್ಲಿ ಅವರು ಯಶಸ್ವಿಯಾಗಿದ್ದು, ಅದಕ್ಕೆ ಅಂಬೇಡ್ಕರ್ ಅವರು ತೋರಿದ ಪ್ರತಿರೋಧ – ಹತಾಶೆ ಮತ್ತು ಆ ನಂತರ ಅವರ ಪ್ರತಿಕ್ರಿಯೆಗಳು ಕಟ್ಟಾ ದಲಿತರಲ್ಲಿ ಗಾಂಧಿಯವರನ್ನು ವಿರೋಧ ಮೀರಿ ದ್ವೇಷಿಸಲು ಕಾರಣವಾಗಿದೆ....

ಹೌದು, ಅಸ್ಪೃಶ್ಯತಾ ನಿವಾರಣೆ, ದಲಿತ ರಕ್ಷಣೆ ಮತ್ತು ಸಬಲೀಕರಣ, ದಲಿತ ಅಸ್ಮಿತೆಯ ಜಾಗೃತಿ, ಶತಮಾನಗಳ ಶೋಷಣೆಗೆ ಒಂದಷ್ಟು ಶಾಶ್ವತ ಪರಿಹಾರ ಮತ್ತು ಒಟ್ಟಾರೆ ದಲಿತ ಅಭ್ಯುದಯದ ದೃಷ್ಟಿಯಿಂದ " ಪೂನಾ ಮೀಸಲಾತಿ ಒಪ್ಪಂದ " ಅತ್ಯಂತ ಮಹತ್ವದ್ದು. ಈಗಿನ ಸಂದರ್ಭದಲ್ಲಿ ಯೋಚಿಸಿದರೆ ಅದು ಆಗ ಜಾರಿಯಾಗಿದ್ದರೆ ದಲಿತರ ಪರಿಸ್ಥಿತಿ ಈಗ ಇರುವುದಕ್ಕಿಂತ ಉತ್ತಮ ಮಟ್ಟದಲ್ಲಿ ಇರುತ್ತಿತ್ತು ಎಂದು ಖಂಡಿತ ಭಾವಿಸಬಹುದು. ಅದನ್ನು ಅಂದು ಅತ್ಯಂತ ಪ್ರಬಲವಾಗಿ ವಿರೋಧಿಸಿದ ಗಾಂಧಿ ದಲಿತ ಸಮುದಾಯಗಳ ಕೋಪಕ್ಕೆ ಅರ್ಹರು ಎಂಬುದು ಸಹ ಅಷ್ಟೇ ನಿಜ. ಆದರೆ......

ಆದರೆ ಗಾಂಧಿಯ ಒಟ್ಟು ಬದುಕನ್ನು, ಹೋರಾಟವನ್ನು ವ್ಯಕ್ತಿತ್ವವನ್ನು, ಆಗಿನ ಕಾಲಘಟ್ಟದ ಪರಿಸ್ಥಿತಿಯನ್ನು ಅವಲೋಕಿಸಿದರೆ ಅವರು ಆ ಒಂದು ವಿಷಯದಲ್ಲಿ ದಲಿತರ ಕ್ಷಮೆಗೆ ಅರ್ಹರು. ಏಕೆಂದರೆ ಅವರ ಆಗಿನ ಉದ್ದೇಶ ಸೂಕ್ಷ್ಮವಾಗಿ ಪರಿಶೀಲಿಸಿದರೆ ಸನಾತನ ಧರ್ಮದ ರಕ್ಷಣೆ ಮತ್ತು ಸ್ವಾತಂತ್ರ್ಯ ಪಡೆಯಲು ಒಗ್ಗಟ್ಟನ್ನು ಕಾಪಾಡುವುದು ಮುಖ್ಯವಾಗಿತ್ತೇ ಹೊರತು ದಲಿತರನ್ನು ಕೆಳ ಹಂತದಲ್ಲಿಯೇ ಉಳಿಸಿ ಅವರನ್ನು ಶೋಷಿಸುವುದಲ್ಲ ಮತ್ತು ಅವರಿಗೆ ಅನ್ಯಾಯ ಮಾಡುವುದಲ್ಲ. ಖಂಡಿತ ಗಾಂಧಿ ಅಷ್ಟೊಂದು ಪ್ರಜ್ಞಾಪೂರ್ವಕ ಕೆಟ್ಟ ಮನಸ್ಥಿತಿಯವರಲ್ಲ.....

ಕೆಲವರು ಒಂದಷ್ಟು ಗಾಂಧಿಯವರ ಬರಹಗಳು ಮತ್ತು ಹೇಳಿಕೆಗಳು ಹೇಗೆ ದಲಿತ ವಿರೋಧಿಯಾಗಿವೆ ಮತ್ತು ಅಮಾನವೀಯವಾಗಿದೆ ಎಂಬುದನ್ನು ದಾಖಲೆಗಳ ಸಮೇತ ವಿವರಿಸುತ್ತಾರೆ. ಅದು ಬಹಳಷ್ಟು ನಿಜವೂ ಸಹ. ಆದರೆ ಅದರಲ್ಲಿ ಕೆಲವು ಗಾಂಧಿ ಪರಿವರ್ತನೆ ಹೊಂದುವ ಮೊದಲಿನ ಅಭಿಪ್ರಾಯ ಮತ್ತು ಅಂಬೇಡ್ಕರ್ ಅವರೊಂದಿಗೆ ಸಂಘರ್ಷದಲ್ಲಿ ಮೂಡಿದ್ದು ಜೊತೆಗೆ ಕೆಲವು ಸನ್ನಿವೇಶಗಳಲ್ಲಿ ಬೇರೆಯದೇ ಉದ್ದೇಶದಿಂದ ಹೇಳಿದ್ದು ಆಗಿವೆ. ಒಮ್ಮೆ ಒಬ್ಬ ವ್ಯಕ್ತಿಯನ್ನು ದ್ವೇಷಿಸಲು ಪ್ರಾರಂಭಿಸಿದರೆ ಆ ವ್ಯಕ್ತಿಯ ಎಲ್ಲಾ ಮಾತುಗಳು ಹಾಗೆಯೇ ಪ್ರತಿಧ್ವನಿಸುವ ಮನಃಶಾಸ್ತ್ರೀಯ ಗುಣಗಳನ್ನು ಇಲ್ಲಿ ನೆನಪಿಸಿಕೊಳ್ಳಬಹುದು...

ಪೂನಾ ಒಪ್ಪಂದದ ಸಂಪೂರ್ಣ ಮಾಹಿತಿಯನ್ನು ಅನೇಕ ಇತಿಹಾಸದ ಪುಸ್ತಕಗಳು ಮತ್ತು ಗೂಗಲ್ ಸರ್ಚನಲ್ಲಿ ಪಡೆಯ ಬಹುದು. ಅದನ್ನು ಇಲ್ಲಿ ಪ್ರಸ್ತಾಪಿಸಿದರೆ ತುಂಬಾ ದೀರ್ಘವಾಗುತ್ತದೆ. ಆದರೆ ಧಾರ್ಮಿಕ ಮತ್ತು ಆಧ್ಯಾತ್ಮಿಕ ಒಲವಿನ ಗಾಂಧಿಯವರಿಗೆ ಅಸ್ಪೃಶ್ಯ ದಲಿತ ಸಮುದಾಯಗಳು ಸನಾತನ ಧರ್ಮದ ಹಿಂದೂ ಜೀವನಶೈಲಿಯ ಭಾಗವೇ ಎಂದು ಸ್ಪಷ್ಟವಾಗಿ ಮತ್ತು ಬಲವಾಗಿ ನಂಬಿದ್ದರು. ಅವರಿಗೆ ಪ್ರತ್ಯೇಕ ಮೀಸಲಾತಿ ನೀಡಿದರೆ ನಮ್ಮ ಧರ್ಮ ಒಡೆದು ಹೋಗುತ್ತದೆ ಮತ್ತು ದಲಿತರು ಪ್ರತ್ಯೇಕವಾಗುತ್ತಾರೆ ಎಂಬ ಆತಂಕ ಸದಾ ಕಾಡುತ್ತಿರುತ್ತದೆ. ಅವರು ನಮ್ಮಂತೆ ಮನುಷ್ಯರು. ಏನೋ ಕಾರಣದಿಂದಾಗಿ ಪ್ರತ್ಯೇಕವಾಗಿದ್ದಾರೆ. ನಮ್ಮ ಮನಸ್ಥಿತಿಯನ್ನು ಬದಲಾಯಿಸಿಕೊಳ್ಳುವ ಮೂಲಕ ಮತ್ತು ಸ್ವಾತಂತ್ರ್ಯ ನಂತರ ಈ ದೇಶದಿಂದ ಅಸ್ಪೃಶ್ಯತೆಯನ್ನು ಸಂಪೂರ್ಣ ನಿವಾರಿಸಿಕೊಳ್ಳಬಹುದು ಎಂದು ಬಲವಾಗಿ ನಂಬಿರುತ್ತಾರೆ. ಅಷ್ಟೊಂದು ವಿಶಾಲ ಹೃದಯಿಯವರು. ಆದರೆ ಜಾತಿಯ ಮೂಲಭೂತವಾದಿಗಳ ನಡುವೆ ಅದು ಅಸಾಧ್ಯ, ಮರ್ಯಾದ ಹತ್ಯೆಗೂ ನಮ್ಮ ಜನ ಸಿದ್ದರಿದ್ದಾರೆ ಎಂಬುದನ್ನು ಗ್ರಹಿಸಲು ಅವರು ವಿಫಲರಾಗುತ್ತಾರೆ. ಅದರ ಪರಿಣಾಮ ಗಾಂಧಿ ಶಾಶ್ವತವಾಗಿ ಕೆಲವು ದಲಿತ ನಾಯಕರ ವಿರೋಧಿಗಳಾಗಿಯೇ ಉಳಿದರು.....

ಅಂಬೇಡ್ಕರ್ ಅವರಿಗೆ ಹೋಲಿಸಿದರೆ ದಲಿತ ಶೋಷಣೆಗೆ ಗಾಂಧಿಯವರ ಕೊಡುಗೆ ಅತ್ಯಲ್ಪ. ಕೊನೆಯ ಹಂತದಲ್ಲಿ ಎಲ್ಲರ ಪ್ರತಿರೋಧದ ನಡುವೆಯೂ ದಲಿತರನ್ನು ಮುಖ್ಯವಾಹಿನಿಗೆ ಸೇರಿಸಲು ತಾವು ಸೇರಿ ಅನೇಕ ಒತ್ತಡಗಳನ್ನು ನಿರ್ಮಿಸುತ್ತಾರೆ ಮತ್ತು ಆಚರಣೆಗೆ ತರುತ್ತಾರೆ. ಆದರೆ ಅಂಬೇಡ್ಕರ್ ದೃಷ್ಟಿಯಲ್ಲಿ ಅದು ಕೇವಲ ನಾಟಕ ಎಂದು ಟೀಕೆಗೆ ಒಳಗಾಗುತ್ತದೆ. ಒಂದು ಹಂತದಲ್ಲಿ ಅಂಬೇಡ್ಕರ್ ಗಾಂಧಿಯವರನ್ನು ಅನೇಕ ಹತಾಶೆಗಳ ಕಾರಣ ಸಾಕಷ್ಟು ವಿರೋಧಿಸುತ್ತಾರೆ. ಆಗಿನ ದೇಶದ ನಾಯಕತ್ವ ಗಾಂಧಿಯವರ ಬಳಿ ಇದ್ದುದರಿಂದ ಸಹಜವಾಗಿಯೇ ಅವರನ್ನೇ ಪ್ರಶ್ನಿಸಬೇಕಾಗುತ್ತದೆ. ಆದರೆ ಅದು ಈಗಿನ ಕಾಲಘಟ್ಟಕ್ಕೆ ಅಷ್ಟು ಸೂಕ್ತವಾಗುವುದಿಲ್ಲ.....

ಅಂಬೇಡ್ಕರ್ ಅವರೊಂದಿಗೆ ಮತ್ತು ಅವರಿಗಾಗಿ ಗಾಂಧಿ ಸಂಘರ್ಷ ನಡೆಸುತ್ತಾರೆ, ಉಪವಾಸ ಮಾಡುತ್ತಾರೆ, ಗಾಂಧಿ ಅತ್ಯಂತ ಪ್ರಬಲವಾಗಿದ್ದ ಕಾಲದಲ್ಲಿಯೇ ಅಂಬೇಡ್ಕರ್ ಸಂವಿಧಾನ ಕರಡು ರಚನಾ ಸಮಿತಿಯ ಅಧ್ಯಕ್ಷರಾಗುತ್ತಾರೆ, ಪ್ರಾರಂಭದ ನೆಹರು ಸಂಪುಟದಲ್ಲಿ ಮಂತ್ರಿಯಾಗುತ್ತಾರೆ ಎಂಬುದು ಗಾಂಧಿ ಅಂಬೇಡ್ಕರ್ ಅವರನ್ನು ಈಗಿನ ಉಗ್ರ ದಲಿತರು ವಿರೋಧಿಸುವಷ್ಟು ಮತ್ತು ಭಾವಿಸುವಷ್ಟು ಗಾಂಧಿ ದ್ವೇಷಿಸುತ್ತಿರಲಿಲ್ಲ ಎಂಬುದಕ್ಕೆ ಸಾಕಷ್ಟು ಪುರಾವೆ ಒದಗಿಸುತ್ತದೆ.....

ಇರಲಿ, ಏನೇ ಆಗಲಿ ಗಾಂಧಿ ಮತ್ತು ಅಂಬೇಡ್ಕರ್ ಅವರಿಗೆ ಅವರು ಬಯಸಿದಂತೆ ಅಭಿಪ್ರಾಯ ರೂಪಿಸಿಕೊಳ್ಳುವ, ಹೋರಾಡುವ, ಬದುಕುವ ಸಂಪೂರ್ಣ ಸ್ವಾತಂತ್ರ್ಯವಿದೆ ಹಾಗೆಯೇ ಅದನ್ನು ವಿಮರ್ಶಿಸುವ ಸ್ವಾತಂತ್ರ್ಯ ಮತ್ತು ಅವರ ಬಗ್ಗೆ ಯಾವುದೇ ಅಭಿಪ್ರಾಯ ಹೊಂದುವ ಸ್ವಾತಂತ್ರ್ಯ ನಮಗೂ ಇದೆ. ಆದರೆ ಇತಿಹಾಸ ವರ್ತಮಾನಕ್ಕೆ ಪಾಠವಾಗಬೇಕೆ ಹೊರತು ದ್ವೇಷದ ಹೊರೆಯಾಗಬಾರದು...

ಗಾಂಧಿಯನ್ನು ವಿರೋಧಿಸುವ ಸ್ವಾತಂತ್ರ್ಯ ಎಲ್ಲರಿಗೂ ಇದೆ. ಆದರೆ ಅವರನ್ನು ಅತ್ಯುಗ್ರವಾಗಿ ದ್ವೇಷಿಸಿದರೆ ಅದು ಮುಖ್ಯವಾಗಿ ದಲಿತ ಚಳವಳಿಗೆ ಸ್ವಲ್ಪ ಹಿನ್ನಡೆಯಾಗಬಹುದು ಮತ್ತು ಅದನ್ನು ಮತ್ತೆ ಮತ್ತೆ ಮುನ್ನಲೆಗೆ ತರುವುದು ಸಹ ಅನವಶ್ಯಕ ಎಂದು ಅತ್ಯಂತ ಆತ್ಮೀಯವಾಗಿ, ಪ್ರೀತಿಯಿಂದ, ಕಾಳಜಿಯಿಂದ ಎಚ್ಚರಿಸುತ್ತಾ.....

ಈಗ ಗಾಂಧಿ ಮತ್ತು ಅಂಬೇಡ್ಕರ್ ಇಬ್ಬರೂ ಇಲ್ಲ. ಆದರೆ ನಾವಿದ್ದೇವೆ. ನಮಗೆ ಅನುಭವವಿದೆ, ಅರಿವಿದೆ, ಅವಕಾಶವಿದೆ. ನಾವುಗಳು ಸಮ ಸಮಾಜದ ನಿರ್ಮಾಣಕ್ಕಾಗಿ ಏನನ್ನಾದರೂ ಮಾಡೋಣ. ಗಾಂಧಿಯನ್ನು ದ್ವೇಷಿಸುತ್ತಾ ಕಾಲ ಕಳೆಯುವ ಬದಲು ಕಟ್ಟುವ ಕೆಲಸ ಮಾಡೋಣ. ....

ಕೊನೆಯದಾಗಿ, ಗಾಂಧಿ ಪರಿಪೂರ್ಣರೇನು ಅಲ್ಲ. ಆದರೆ ಅತ್ಯಂತ ಉಗ್ರವಾಗಿ ದ್ವೇಷಿಸುವಷ್ಟು ಕೆಟ್ಟವರು ಅಲ್ಲ. ನೈತಿಕತೆಗೆ ಗಾಂಧಿ ಸಾಕ್ಷಿ ಪ್ರಜ್ಞೆ, ಮಾನವೀಯತೆಗೆ, ಸಾಮಾಜಿಕ ಸಾಮರಸ್ಯಕ್ಕೆ ಅಂಬೇಡ್ಕರ್ ಸಾಕ್ಷಿ ಪ್ರಜ್ಞೆ ಎಂಬ ಬುದ್ಧ ಪ್ರಜ್ಞೆ ನಮ್ಮೆಲ್ಲರಲ್ಲಿ ಮೂಡಲಿ ಎಂದು ಆಶಿಸುತ್ತಾ.....

ಇದು ಸರಳ ನಿರೂಪಣೆ ಮಾತ್ರ. ಆಳವಾಗಿ ಮತ್ತಷ್ಟು ಚರ್ಚೆ ಬಯಸುವ ವಿಷಯ. ಅದನ್ನು ಆಸಕ್ತರು ಸಮಯವಾದಾಗ ನೇರವಾಗಿ ಮಾತನಾಡೋಣ...

ಧನ್ಯವಾದಗಳು....

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ ಪರಿವರ್ತನೆಗಾಗಿ,

ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ.
ಹೆಚ್.ಕೆ.
9844013068

## ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ

**ಶಿವಮೊಗ್ಗ:** ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್. ಮಧು ಬಂಗಾರಪ್ಪರವರು 21 ರಂದು ಜಿಲ್ಲಾ ಪ್ರವಾಸ ಕೈಗೊಂಡಿರುತ್ತಾರೆ. ಏ. 21 ರಂದು ಬೆ. 10.30ಕ್ಕೆ ಹೊಸನಗರ ಈಡಿಗರ ಸಭಾಭವನದಲ್ಲಿ ಹೊಸನಗರ ತಾಲೂಕಿನ ಜನಸ್ಪಂದನ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಮಧ್ಯಾಹ್ನ 3.00ಕ್ಕೆ ಆಯನೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಆಯನೂರು ಕಾಲೇಜು ಕಟ್ಟಡ ಶಂಕುಸ್ಥಾಪನಾ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ ಹಾಗೂ ಅಂದು ಸೊರಬದಲ್ಲಿ ವಾಸ್ತವ್ಯ ಮಾಡಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## 6ನೇ ತರಗತಿ ವ್ಯಾಸಂಗಕ್ಕೆ ಅರ್ಜಿ

**ಚಿಕ್ಕಮಗಳೂರು:** 2024–25ನೇ ಸಾಲಿನಲ್ಲಿ 5ನೇ ತರಗತಿಯಲ್ಲಿ ವ್ಯಾಸಂಗ ಮಾಡಿ ವಾರ್ಷಿಕ ಪರೀಕ್ಷೆಯಲ್ಲಿ ಶೇ.60ಕ್ಕಿಂತ ಹೆಚ್ಚು ಅಂಕ ಪಡೆದು ಉತ್ತೀರ್ಣರಾಗಿ 6ನೇ ತರಗತಿಯನ್ನು ಜಿಲ್ಲೆಯ ಪ್ರತಿಷ್ಠಿತ ಶಾಲೆಗಳಲ್ಲಿ ವ್ಯಾಸಂಗ ಮಾಡಲು ಇಚ್ಛಿಸುವ ಅರ್ಹ ಪ್ರತಿಭಾವಂತ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹರು ಮೇ 3ರ ಸಂಜೆ 4 ಗಂಟೆಯೊಳಗಾಗಿ ಸಮಾಜ ಕಲ್ಯಾಣ ಇಲಾಖೆಯ ಕಡೂರು, ತರೀಕೆರೆ, ಶೃಂಗೇರಿ, ನರಸಿಂಹರಾಜಪುರ, ಕೊಪ್ಪ, ಚಿಕ್ಕಮಗಳೂರು, ಮೂಡಿಗೆರೆ ತಾಲ್ಲೂಕಿನ ಸಹಾಯಕ ನಿರ್ದೇಶಕರು 1 ಮತ್ತು 2 ಅವರಿಂದ ಅರ್ಜಿ ಪಡೆದು ಭರ್ತಿ ಮಾಡಿ ಎಲ್ಲಾ ಅಗತ್ಯ ದಾಖಲಾತಿಗಳೊಂದಿಗೆ ಸಲ್ಲಿಸಬಹುದು. ವಿದ್ಯಾರ್ಥಿಗಳಿಗೆ ಪ್ರವೇಶ ಪರೀಕ್ಷೆ ನಡೆಸಿ ಆಯ್ಕೆ ನಡೆಸಲಾಗುವುದು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T